# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923











ಸಂಪುಟ: Vol: 04 | ಸಂಚಿಕೆ: Issue: 116 | ರಾಯಚೂರು Raichur | 18-10-2026 | ಭಾನುವಾರ Sunday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685


# ಅನ್ನಭಾಗ್ಯ ಅಕ್ಕಿ ಅಕ್ರಮ ಸಾಗಾಟ ಪ್ರಕರಣ:

## 45 ಕ್ವಿಂಟಲ್ ಅಕ್ಕಿ ವಶ, ಎಫ್ಐಆರ್‌ನಲ್ಲಿ ಇಬ್ಬರ ಹೆಸರು; ಅಕ್ರಮದ ಹಿಂದಿರುವವರು ಯಾರು?

ದೇವದುರ್ಗ: ಬಡ ಕುಟುಂಬಗಳ ಹಸಿವು ನೀಗಿಸಲು ಸರ್ಕಾರ ಜಾರಿಗೊಳಿಸಿರುವ ಅನ್ನಭಾಗ್ಯ ಯೋಜನೆಯ ಪಡಿತರ ಅಕ್ಕಿ ಅಕ್ರಮ ಸಾಗಾಟದ ಆರೋಪದಡಿ ದೇವದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, 45 ಕ್ವಿಂಟಲ್ ಅಕ್ಕಿಯನ್ನು ವಶಪಡಿಸಿಕೊಂಡಿರುವ ಘಟನೆ ಹಲವು ಅನುಮಾನಗಳಿಗೆ ಕಾರಣವಾಗಿದೆ. ಪ್ರಕರಣದಲ್ಲಿ ಚಾಲಕ ಹಾಗೂ ಕಾರ್ಮಿಕನನ್ನು ಆರೋಪಿಗಳನ್ನಾಗಿ ಹೆಸರಿಸಲಾಗಿದ್ದು, ಇಷ್ಟೊಂದು ಪ್ರಮಾಣದ ಅಕ್ಕಿಯನ್ನು ಸಂಗ್ರಹಿಸಿದವರು ಯಾರು, ಸಾಗಾಟಕ್ಕೆ ವ್ಯವಸ್ಥೆ ಮಾಡಿದವರು ಯಾರು, ಮಾನ್ವಿಯಲ್ಲಿ ಅಕ್ಕಿಯನ್ನು ಸ್ವೀಕರಿಸಬೇಕಿದ್ದವರು ಯಾರು ಎಂಬ ಪ್ರಶ್ನೆಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

ದೇವದುರ್ಗ ಪಟ್ಟಣದಲ್ಲಿ ಗುರುವಾರ ರಾತ್ರಿ ಅಶೋಕ್ ಲೇಲ್ಯಾಂಡ್ ವಾಹನ (ಕೆಎ 34 ಬಿ 7723)ದಲ್ಲಿ ಮಾನ್ವಿ ಕಡೆಗೆ ಸಾಗಿಸಲಾಗುತ್ತಿದ್ದ 45 ಕ್ವಿಂಟಲ್ ಪಡಿತರ ಅಕ್ಕಿಯನ್ನು ಪೊಲೀಸರು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಲಭ್ಯವಿರುವ ಎಫ್ಐಆರ್ ಮಾಹಿತಿಯ ಪ್ರಕಾರ, ಮಾನ್ವಿ ತಾಲೂಕಿನ ಬಾಲನಗರದ ವೀರೇಶ್ ಶಿವಪ್ಪ ನಾಯಕ್ (24) ಅವರನ್ನು ಮೊದಲ ಆರೋಪಿ (ಎ-1) ಹಾಗೂ ವಾಹನದ ಚಾಲಕ ಎಂದು ಗುರುತಿಸಲಾಗಿದೆ. ಅದೇ ಗ್ರಾಮದ ಮಹೇಶ್ ತಂದೆ ಹನುಮಂತ ಅವರನ್ನು ಎರಡನೇ ಆರೋಪಿ (ಎ-2) ಹಾಗೂ ಕಾರ್ಮಿಕ ಎಂದು ಉಲ್ಲೇಖಿಸಲಾಗಿದೆ.

ಆದರೆ, ಪ್ರಕರಣದಲ್ಲಿ ಚಾಲಕ ಮತ್ತು ಕಾರ್ಮಿಕನ ಹೆಸರು ಮಾತ್ರ ಆರೋಪಿಗಳಾಗಿ ದಾಖಲಾಗಿರುವ ಹಿನ್ನೆಲೆಯಲ್ಲಿ ಅಕ್ಕಿಯ ನಿಜವಾದ ಮಾಲೀಕತ್ವ, ಖರೀದಿ ಮತ್ತು ಸಂಗ್ರಹಣೆಯ ವ್ಯವಸ್ಥೆ ಹಾಗೂ ಸಾಗಾಟದ ಹಿಂದಿರುವ ಇತರ ವ್ಯಕ್ತಿಗಳ ಪಾತ್ರದ ಕುರಿತು ಸಮಗ್ರ ತನಿಖೆ ನಡೆಸಬೇಕೆಂಬ ಒತ್ತಾಯ ಕೇಳಿಬಂದಿದೆ. ಆರೋಪಿಗಳ ವಿರುದ್ಧ ದಾಖಲಾಗಿರುವ ಪ್ರಕರಣದ ಅಂತಿಮ ಸತ್ಯಾಸತ್ಯತೆ ಪೊಲೀಸ್ ತನಿಖೆಯಿಂದ ಹೊರಬರಬೇಕಿದೆ.




### ಬಡವರ ಅಕ್ಕಿ ಖಾಸಗಿ ವ್ಯಾಪಾರಕ್ಕೆ ಬಳಕೆಯಾಗುತ್ತಿದೆಯೇ?

ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಆಹಾರ ಭದ್ರತೆ ಒದಗಿಸುವ ಉದ್ದೇಶದಿಂದ ಸರ್ಕಾರ ಅನ್ನಭಾಗ್ಯ ಯೋಜನೆಯಡಿ ಪಡಿತರ ಅಕ್ಕಿ ವಿತರಿಸುತ್ತಿದೆ. ಆದರೆ, ಈ ಯೋಜನೆಯಡಿ ಫಲಾನುಭವಿಗಳಿಗೆ ದೊರೆಯುವ ಅಕ್ಕಿಯನ್ನು ಕೆಲವರು ಹಣದ ಆಮಿಷವೊಡ್ಡಿ ಖರೀದಿಸಿ, ದೊಡ್ಡ ಪ್ರಮಾಣದಲ್ಲಿ ಸಂಗ್ರಹಿಸಿ ಖಾಸಗಿ ವ್ಯಾಪಾರಕ್ಕೆ ಬಳಸುತ್ತಿದ್ದಾರೆ ಎಂಬ ಆರೋಪಗಳು ಕೇಳಿಬರುತ್ತಿವೆ.

ನ್ಯಾಯಬೆಲೆ ಅಂಗಡಿಗಳಿಂದ ಅಕ್ಕಿ ಪಡೆದ ಫಲಾನುಭವಿಗಳನ್ನು ಸಂಪರ್ಕಿಸಿ, ಅವರಿಂದ ಕಡಿಮೆ ದರಕ್ಕೆ ಅಕ್ಕಿ ಖರೀದಿಸಿ ನಂತರ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಜಾಲ ಕಾರ್ಯನಿರ್ವಹಿಸುತ್ತಿದೆಯೇ ಎಂಬ ಅನುಮಾನ ವ್ಯಕ್ತವಾಗಿದೆ. ಆದರೆ, ದೇವದುರ್ಗದಲ್ಲಿ ವಶಪಡಿಸಿಕೊಂಡ ಅಕ್ಕಿಯನ್ನು ಇದೇ ರೀತಿಯಲ್ಲಿ ಸಂಗ್ರಹಿಸಲಾಗಿದೆಯೇ ಎಂಬುದು ಇನ್ನೂ ದೃಢಪಟ್ಟಿಲ್ಲ.

ಒಂದೇ ವಾಹನದಲ್ಲಿ 45 ಕ್ವಿಂಟಲ್ ಅಕ್ಕಿ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಅಷ್ಟೊಂದು ಪ್ರಮಾಣದ ಅಕ್ಕಿ ಎಲ್ಲಿಂದ ಬಂತು, ಎಷ್ಟು ದಿನಗಳಿಂದ ಸಂಗ್ರಹಿಸಲಾಗಿತ್ತು, ಅದನ್ನು ಸಂಗ್ರಹಿಸಲು ಹಣ ಒದಗಿಸಿದವರು ಯಾರು ಎಂಬ ಅಂಶಗಳನ್ನು ತನಿಖೆಗೆ ಒಳಪಡಿಸಬೇಕಿದೆ.

### ಮಾನ್ವಿಯಲ್ಲಿ ಅಕ್ಕಿ ಸ್ವೀಕರಿಸಬೇಕಿದ್ದವರು ಯಾರು?

ಪ್ರಕರಣದಲ್ಲಿ ಪ್ರಮುಖವಾಗಿ ಕೇಳಿಬರುತ್ತಿರುವ ಪ್ರಶ್ನೆ ಎಂದರೆ, ದೇವದುರ್ಗದಿಂದ ಮಾನ್ವಿಗೆ ಸಾಗಿಸಲಾಗುತ್ತಿತ್ತು ಎನ್ನಲಾದ ಅಕ್ಕಿಯ ಅಂತಿಮ ಗಮ್ಯಸ್ಥಾನ ಯಾವುದು ಎಂಬುದು.

ಮಾನ್ವಿ ಪಟ್ಟಣದಲ್ಲಿ ಅಕ್ಕಿಯನ್ನು ಯಾರಿಗೆ ತಲುಪಿಸಲು ಉದ್ದೇಶಿಸಲಾಗಿತ್ತು? ಅಲ್ಲಿ ಯಾವುದೇ ಗೋದಾಮು ಅಥವಾ ಖಾಸಗಿ ವ್ಯಾಪಾರಿಯೊಂದಿಗೆ ಸಂಪರ್ಕವಿತ್ತೇ? ಅಕ್ಕಿಯನ್ನು ಸ್ವೀಕರಿಸಲು ಮುಂಚಿತವಾಗಿ ವ್ಯವಸ್ಥೆ ಮಾಡಲಾಗಿತ್ತೇ? ಎಂಬ ಪ್ರಶ್ನೆಗಳಿಗೆ ತನಿಖೆಯಿಂದ ಉತ್ತರ ಸಿಗಬೇಕಿದೆ.

ಅಲ್ಲದೆ, ಅಕ್ಕಿ ಸಾಗಾಟಕ್ಕೆ ಬಳಸಲಾದ ವಾಹನದ ಮಾಲೀಕರು ಯಾರು, ವಾಹನವನ್ನು ಬಾಡಿಗೆಗೆ ಪಡೆದವರು ಯಾರು, ಸಾಗಾಟದ ವೆಚ್ಚವನ್ನು ಭರಿಸಿದವರು ಯಾರು ಹಾಗೂ ಚಾಲಕ ಮತ್ತು ಕಾರ್ಮಿಕರಿಗೆ ಈ ಕೆಲಸವನ್ನು ವಹಿಸಿದವರು ಯಾರು ಎಂಬ ಅಂಶಗಳ ಪರಿಶೀಲನೆಯೂ ಅಗತ್ಯವಾಗಿದೆ.

ವಾಹನದ ಚಾಲಕ ಹಾಗೂ ಕಾರ್ಮಿಕರ ಪಾತ್ರದ ಜೊತೆಗೆ ಅಕ್ಕಿಯ ಖರೀದಿ, ಸಂಗ್ರಹಣೆ ಮತ್ತು ಮಾರಾಟದ ವ್ಯವಸ್ಥೆಯಲ್ಲಿ ಇತರರು ಭಾಗಿಯಾಗಿದ್ದಾರೆಯೇ ಎಂಬುದನ್ನು ಪತ್ತೆಹಚ್ಚಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

### ಅಕ್ಕಿಯ ಮೂಲ ಪತ್ತೆಗೆ ದಾಖಲೆಗಳ ಪರಿಶೀಲನೆ ಅಗತ್ಯ

ವಶಪಡಿಸಿಕೊಂಡಿರುವ ಅಕ್ಕಿ ನಿಜವಾಗಿಯೂ ಅನ್ನಭಾಗ್ಯ ಯೋಜನೆಯಡಿ ವಿತರಿಸಲಾದ ಪಡಿತರ ಅಕ್ಕಿಯೇ ಎಂಬುದನ್ನು ಸಂಬಂಧಪಟ್ಟ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳು ಪರಿಶೀಲಿಸಬೇಕಿದೆ.

ಅಕ್ಕಿಯ ಮೂಲ, ಸಂಗ್ರಹಣೆಯ ಸ್ಥಳ, ಸಾಗಾಟಕ್ಕೆ ಸಂಬಂಧಿಸಿದ ದಾಖಲೆಗಳು ಹಾಗೂ ವಾಹನದ ವಿವರಗಳನ್ನು ಪರಿಶೀಲಿಸುವ ಮೂಲಕ ಪ್ರಕರಣದ ಸಂಪೂರ್ಣ ಹಿನ್ನೆಲೆಯನ್ನು ಪತ್ತೆಹಚ್ಚಲು ಸಾಧ್ಯವಿದೆ.

ಅಗತ್ಯವಿದ್ದಲ್ಲಿ ನ್ಯಾಯಬೆಲೆ ಅಂಗಡಿಗಳ ಪಡಿತರ ವಿತರಣೆ ದಾಖಲೆಗಳು, ಅಕ್ಕಿ ಸಂಗ್ರಹಣೆಯ ಮಾಹಿತಿ ಹಾಗೂ ಸಾಗಾಟದ ಮಾರ್ಗದಲ್ಲಿರುವ ಲಭ್ಯ ಸಾಕ್ಷ್ಯಗಳನ್ನು ಪರಿಶೀಲಿಸಿ, ಅಕ್ರಮದ ಹಿಂದೆ ಸಂಘಟಿತ ಜಾಲವಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕಿದೆ.

### ಪ್ರಗತಿಪರ ಸಂಘಟನೆಗಳಿಂದ ಉನ್ನತ ಮಟ್ಟದ ತನಿಖೆಗೆ ಆಗ್ರಹ

ಬಡವರಿಗೆ ತಲುಪಬೇಕಾದ ಪಡಿತರ ಅಕ್ಕಿ ಅಕ್ರಮವಾಗಿ ಖಾಸಗಿ ವ್ಯಾಪಾರಕ್ಕೆ ಬಳಕೆಯಾಗುತ್ತಿರುವುದು ದೃಢಪಟ್ಟರೆ ಅದು ಗಂಭೀರ ಪ್ರಕರಣವಾಗಲಿದೆ. ಈ ಹಿನ್ನೆಲೆಯಲ್ಲಿ ಕೇವಲ ವಾಹನದ ಚಾಲಕ ಮತ್ತು ಕಾರ್ಮಿಕರ ಪಾತ್ರಕ್ಕೆ ತನಿಖೆಯನ್ನು ಸೀಮಿತಗೊಳಿಸದೆ, ಅಕ್ಕಿಯ ಮೂಲದಿಂದ ಹಿಡಿದು ಅಂತಿಮವಾಗಿ ಅದನ್ನು ಸ್ವೀಕರಿಸಬೇಕಿದ್ದವರವರೆಗೆ ಸಂಪೂರ್ಣ ತನಿಖೆ ನಡೆಸಬೇಕು ಎಂದು ಪ್ರಗತಿಪರ ಸಂಘಟನೆಗಳು ಒತ್ತಾಯಿಸಿವೆ.

ಪ್ರಕರಣದ ಹಿಂದೆ ಯಾರೇ ಇದ್ದರೂ ಅವರ ಪಾತ್ರವನ್ನು ಸಾಕ್ಷ್ಯಾಧಾರಗಳ ಮೂಲಕ ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕು. ಅಕ್ಕಿ ಸಂಗ್ರಹಣೆ ಮತ್ತು ಸಾಗಾಟಕ್ಕೆ ಹಣಕಾಸು ನೆರವು ನೀಡಿದವರು, ವಾಹನದ ವ್ಯವಸ್ಥೆ ಮಾಡಿದವರು ಹಾಗೂ ಅಕ್ಕಿ ಖರೀದಿಸಲು ಮುಂದಾಗಿದ್ದವರ ಕುರಿತು ತನಿಖೆ ನಡೆಸಬೇಕು ಎಂಬ ಆಗ್ರಹ ವ್ಯಕ್ತವಾಗಿದೆ.

ಸರ್ಕಾರದ ಮಹತ್ವಾಕಾಂಕ್ಷಿ ಅನ್ನಭಾಗ್ಯ ಯೋಜನೆಯ ಉದ್ದೇಶಕ್ಕೆ ಧಕ್ಕೆಯಾಗದಂತೆ ಆಹಾರ ಇಲಾಖೆ ಮತ್ತು ಪೊಲೀಸ್ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಪಡಿತರ ಅಕ್ಕಿಯ ಅಕ್ರಮ ಖರೀದಿ ಹಾಗೂ ಸಾಗಾಟ ತಡೆಯಲು ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಸಂಘಟನೆಗಳು ಒತ್ತಾಯಿಸಿವೆ.

ಒಟ್ಟಿನಲ್ಲಿ, ದೇವದುರ್ಗದಲ್ಲಿ 45 ಕ್ವಿಂಟಲ್ ಅಕ್ಕಿ ವಶಪಡಿಸಿಕೊಂಡಿರುವ ಪ್ರಕರಣವು ಕೇವಲ ಒಂದು ವಾಹನದ ಸಾಗಾಟಕ್ಕೆ ಸಂಬಂಧಿಸಿದ ಘಟನೆಯೇ ಅಥವಾ ಇದರ ಹಿಂದೆ ದೊಡ್ಡ ಮಟ್ಟದ ಅಕ್ರಮ ಜಾಲವಿದೆಯೇ ಎಂಬುದನ್ನು ತನಿಖೆ ಸ್ಪಷ್ಟಪಡಿಸಬೇಕಿದೆ. ಎಫ್ಐಆರ್ ನಲ್ಲಿ ಹೆಸರಿಸಲಾದ ಇಬ್ಬರ ಪಾತ್ರದ ಜೊತೆಗೆ ಅಕ್ಕಿಯ ಮಾಲೀಕತ್ವ, ಸಂಗ್ರಹಣೆ ಮತ್ತು ಮಾನ್ವಿಯಲ್ಲಿನ ಉದ್ದೇಶಿತ ಸ್ವೀಕರಿಸುವವರ ವಿವರಗಳನ್ನು ಬಹಿರಂಗಪಡಿಸುವುದು ಪ್ರಕರಣದ ಸತ್ಯಾಸತ್ಯತೆ ತಿಳಿಯಲು ಮಹತ್ವದ್ದಾಗಿದೆ.

## ಕಲ್ಯಾಣ ಕರ್ನಾಟಕದ ಶೈಕ್ಷಣಿಕ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಬದ್ಧ: ಎನ್.ಎಸ್. ಬೋಸರಾಜು



ರಾಯಚೂರು: ದೇಶದ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರು ಹಾಗೂ ಉಪನ್ಯಾಸಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಪ್ರಗತಿಗೆ ಕಾಂಗ್ರೆಸ್ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಶಿಕ್ಷಕ-ಉಪನ್ಯಾಸಕರ ಸಮಸ್ಯೆಗಳ ಪರಿಹಾರಕ್ಕೆ ಬದ್ಧವಾಗಿದೆ ಎಂದು ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹೇಳಿದರು.

ನಗರದ ನೃಪತುಂಗ ಹೋಟೆಲ್‌ನಲ್ಲಿ ರಾಯಚೂರು ನಗರ ಮತ್ತು ತಾಲೂಕು ವ್ಯಾಪ್ತಿಯ ವಿವಿಧ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಆಯೋಜಿಸಿದ್ದ ಸಭೆಯಲ್ಲಿ ಈಶಾನ್ಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಪರ ಮತಯಾಚಿಸಿ ಮಾತನಾಡಿದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಮೂಲಕ ಈ ಭಾಗದ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಒದಗಿಸಲು ಆದ್ಯತೆ ನೀಡಲಾಗುತ್ತಿದೆ. ಗ್ರಾಮೀಣ ಪ್ರದೇಶಗಳ ಶಾಲೆಗಳ ಅಭಿವೃದ್ಧಿ, ಅಗತ್ಯ ಮೂಲಸೌಕರ್ಯಗಳ ಕಲ್ಪಿಸುವಿಕೆ ಹಾಗೂ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ಶಿಕ್ಷಕರ ಹಿತಾಸಕ್ತಿ ಕಾಪಾಡುವ ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವ ಪ್ರತಿನಿಧಿಗಳು ವಿಧಾನ ಪರಿಷತ್‌ನಲ್ಲಿ ಇರಬೇಕಾದ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಈಶಾನ್ಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರನ್ನು ಬೆಂಬಲಿಸಿ, ಅವರ ಗೆಲುವಿಗೆ ಶಿಕ್ಷಕರು, ಉಪನ್ಯಾಸಕರು ಹಾಗೂ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ತಮ್ಮ ಸಂಸ್ಥೆಗಳು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ಬೋಸರಾಜು ಅವರ ಗಮನಕ್ಕೆ ತಂದರು. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿನ ಶಾಲಾ ಕಟ್ಟಡಗಳ ನಿರ್ಮಾಣ, ಅಗತ್ಯ ದಾಖಲೆಗಳ ಲಭ್ಯತೆ, ಕಟ್ಟಡ ನಿರ್ಮಾಣಕ್ಕೆ ಅನುಮತಿ ಹಾಗೂ ಕುಡಿಯುವ ನೀರಿನ ಸಂಪರ್ಕಕ್ಕೆ ಸಂಬಂಧಿಸಿದ ತೊಂದರೆಗಳ ಕುರಿತು ಚರ್ಚಿಸಲಾಯಿತು.

ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ರಾಜಾ ಶ್ರೀನಿವಾಸ್ ಮಾತನಾಡಿ, ಗ್ರಾಮೀಣ ಭಾಗದ ಸಣ್ಣ ಶಿಕ್ಷಣ ಸಂಸ್ಥೆಗಳು ಹಲವು ಸಮಸ್ಯೆಗಳ ನಡುವೆ ಕಾರ್ಯನಿರ್ವಹಿಸುತ್ತಿವೆ. ಇಂತಹ ಸಂಸ್ಥೆಗಳ ಮುಖ್ಯಸ್ಥರನ್ನು ಒಂದೆಡೆ ಸೇರಿಸಿ ಅವರ ಸಮಸ್ಯೆಗಳನ್ನು ಆಲಿಸಿರುವುದು ವಿಶ್ವಾಸ ಮೂಡಿಸಿದೆ. ಶರಣಪ್ಪ ಮಟ್ಟೂರು ಅವರ ಗೆಲುವಿಗೆ 2ನೇ ಪುಟಕ್ಕೆ

## ಸರಳ, ಅರ್ಥಪೂರ್ಣವಾಗಿ ಜಯಂತಿ ಆಚರಣೆ: ಜಿಲ್ಲಾಧಿಕಾರಿ ಪೂವಿತಾ ಎಸ್.



ರಾಯಚೂರು ಅ. 17 (ಕರ್ನಾಟಕ ವಾರ್ತೆ): ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಅಕ್ಟೋಬರ್ 26ರಂದು ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲಾಡಳಿತದ ವತಿಯಿಂದ ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ತಿಳಿಸಿದರು.

ಅಕ್ಟೋಬರ್ 17ರ ಶನಿವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚುನಾವಣಾ ನೀತಿ ಸಂಹಿತೆ ನಿಯಮ ಪಾಲಿಸಿಕೊಂಡು ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಅಥವಾ ವಾಲ್ಮೀಕಿ ಭವನದಲ್ಲಿ ಜಯಂತಿ ಆಚರಿಸಲು ಹಾಗೂ ಮೆರವಣಿಗೆ ಮಾಡುವ ಕುರಿತು ಮುಂದಿನ ದಿನಗಳಲ್ಲಿ ತಿಳಿಸಲಾಗುತ್ತದೆ. ವಾಲ್ಮೀಕಿ ಅವರ ಜೀವನ, ಆದರ್ಶ ಹಾಗೂ ಸಮಾಜಕ್ಕೆ ನೀಡಿದ ಕೊಡುಗೆ ಸ್ಮರಿಸಲು ಆದ್ಯತೆ ನೀಡಲಾಗುವುದು ಎಂದರು.

ಅದು ಬೆಳಿಗ್ಗೆ 7.30ಕ್ಕೆ ಲಿಂಗಸುಗೂರು ರಸ್ತೆಯ ವಾಲ್ಮೀಕಿ ವೃತ್ತದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುತ್ತದೆ. ಬೆಳಿಗ್ಗೆ 11.30ಕ್ಕೆ ಮಹರ್ಷಿ ವಾಲ್ಮೀಕಿ ಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದ ಸಿದ್ದತೆ ಅಗತ್ಯ ಸಂಬಧಿಸಿದ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಮಾತನಾಡಿ, ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಯಂತಿ ಆಚರಣೆ ಪ್ರತಿಯೊಂದು ಹಂತದಲ್ಲಿಯೂ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಕಾರ್ಯಕ್ರಮದ ರೂಪುರೇಷೆ ಅದಕ್ಕೆ ಅನುಗುಣವಾಗಿ ಸಿದ್ಧಪಡಿಸಬೇಕು. ಸಂಬಧಪಟ್ಟ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯ ಸಾಧಿಸಿ, ನಿಗದಿತ ಕಾರ್ಯಕ್ರಮ ಸುಗಮವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಜಯಂತಿ ಆಚರಣೆಗೆ ಅಗತ್ಯವಿರುವ ಸಭಾಂಗಣದ ವ್ಯವಸ್ಥೆ, ಪುಷ್ಪಾರ್ಚನೆ, ಉಪನ್ಯಾಸಕ್ಕೆ ಸಂಬಧಿಸಿದ ಸಿದ್ಧತೆ ಮುಂಚಿತವಾಗಿಯೇ ಪೂರ್ಣಗೊಳಿಸಬೇಕು. ಕಾರ್ಯಕ್ರಮದಲ್ಲಿ ಯಾವುದೇ ಗೊಂದಲ ಅಥವಾ ಲೋಪ ಉಂಟಾಗದತೆ ಸಂಬಧಪಟ್ಟ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿದ ಸಮುದಾಯದ 2ನೇ ಪುಟಕ್ಕೆ

## ತರಬೇತಿಯಲ್ಲಿ ನೀಡಲಾದ ಮಾರ್ಗಸೂಚಿಗಳನ್ನು ಪಾಲಿಸಿ: ಜಿಲ್ಲಾಧಿಕಾರಿ ಪೂವಿತಾ




ರಾಯಚೂರು ಅ. 17 (ಕರ್ನಾಟಕ ವಾರ್ತೆ): ಹಾಸ್ಟೆಲ್‌ಗಳಲ್ಲಿ ಅಡುಗೆ ತಯಾರಿಸುವಾಗ ಎದುರಾಗುವ ಸಮಸ್ಯೆಗಳನ್ನು ಬಗೆಹರಿಸಲು ಮತ್ತು ವಿದ್ಯಾರ್ಥಿಗಳಿಗೆ ಗುಣಮಟ್ಟದ, ಶುಚಿ ಹಾಗೂ ರುಚಿಯಾದ ಆಹಾರವನ್ನು ಒದಗಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತದ ವತಿಯಿಂದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ತರಬೇತಿಯಲ್ಲಿ ನೀಡಲಾದ ಮಾರ್ಗಸೂಚಿಗಳನ್ನು ಪಾಲಿಸಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ಅಕ್ಟೋಬರ್ 17ರ ಶನಿವಾರ ದಂದು ರಾಯಚೂರು ನಗರದ ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಡಾ. ಬಾಬು ಜಗಜೀವನ್ ರಾಮ್ ಅವರ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗ, ಪರಿಶಿಷ್ಟ ವರ್ಗ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಕ್ರೈಸ್ ವಸತಿ ಶಾಲೆಯ ಅಧೀನದಲ್ಲಿರುವ ಖಾಯಂ / ಹೊರ ಸಂಪನ್ಮೂಲ ಡಿ-ಗ್ರೂಪ್ ಸಿಬ್ಬಂದಿಗಳಿಗೆ ಅಡುಗೆ ತಯಾರಿಸುವ ಮತ್ತು ಸ್ವಚ್ಛತೆಯನ್ನು ಕಾಪಾಡುವ ಕುರಿತು ಮೂರನೇಯ ದಿನದ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ಪ್ರತಿಯೊಬ್ಬರೂ ತಮ್ಮ ಮನೆಯಲ್ಲಿ ಅಡುಗೆ ಮಾಡುವಷ್ಟೇ ಕಾಳಜಿ, ಶುಚಿತ್ವ ಮತ್ತು ಜವಾಬ್ದಾರಿಯಿಂದ ಹಾಸ್ಟೆಲ್ ಮಕ್ಕಳಿಗೂ ಅಡುಗೆ ಮಾಡಬೇಕು. ಒಂದು ವೇಳೆ ಯಾವುದಾದರೂ ಪದಾರ್ಥ ಖಾಲಿಯಾದರೆ ಮತ್ತೊಂದು ಪದಾರ್ಥವನ್ನು ಬಳಸುವಾಗ ಅಥವಾ ಬದಲಾಯಿಸುವಾಗ ಅದರ ಸಾಧಕ-ಬಾಧಕಗಳ ಬಗ್ಗೆ ಎಚ್ಚರಿಕೆ ವಹಿಸಬೇಕು ಎಂದರು.

ಹಾಸ್ಟೆಲ್‌ನಲ್ಲಿ ಸಾವಿರಾರು ಮಕ್ಕಳಿಗೆ ಒಟ್ಟಾಗಿ ಅಡುಗೆ ಮಾಡುವಾಗ ಸಣ್ಣ ಪ್ರಮಾದವಾದರೂ ಅದು ಒಬ್ಬರಿಗೆ ಮಾತ್ರ ಸೀಮಿತವಾಗದೆ, ಇಡೀ ಹಾಸ್ಟೆಲ್ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇರುತ್ತದೆ. ಇತ್ತೀಚೆಗೆ ನಡೆದ ಕೆಲವು ಸಣ್ಣಪುಟ್ಟ ಘಟನೆಗಳನ್ನು ಗಮನದಲ್ಲಿಟ್ಟುಕೊಂಡು, ಭವಿಷ್ಯದಲ್ಲಿ ಇಂತಹ ಯಾವುದೇ ಲೋಪಗಳು ಮರುಕಳಿಸದಂತೆ ಎಚ್ಚರಿಕೆ ವಹಿಸುವುದು 2ನೇ ಪುಟಕ್ಕೆ

## ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳು ಸೂಚನೆ: ಜಿಲ್ಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆಯಾಗಲಿ



ರಾಯಚೂರು ಅ. 17 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ನವೆಂಬರ್ 1ರಂದು ಆಚರಿಸಲ್ಪಡುವ ಕನ್ನಡ ರಾಜ್ಯೋತ್ಸವ ದಿನಾಚರಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಕ್ಟೋಬರ್ 17ರ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಆಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡ ರಾಜ್ಯೋತ್ಸವವನ್ನು ವ್ಯವಸ್ಥಿತವಾಗಿ, ಯಾವುದೇ ಲೋಪಗಳಿಲ್ಲದಂತೆ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಯವರು ತಮಗೆ ವಹಿಸಿದ ಕೆಲಸವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಪ್ರತಿ ವರ್ಷದಂತೆ ಈ ವರ್ಷವೂ ಕನ್ನಡ ರಾಜ್ಯೋತ್ಸವದ ದಿನದ ಹಿಂದಿನ ದಿನ ಹಾಗೂ ಕನ್ನಡ ರಾಜ್ಯೋತ್ಸವದ ದಿನ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕನ್ನಡ ರಾಜ್ಯೋತ್ಸವ ಅಂಗವಾಗಿ ನವಂಬರ್ 1ರ ಬೆಳಿಗ್ಗೆ 7.30ಕ್ಕೆ ನಗರದ ಕರ್ನಾಟಕ ಸಂಘದ ಆವರಣದಿಂದ ಭುವನೇಶ್ವರಿಯ ಮೆರವಣಿಗೆಯು ವಿವಿಧ ವೃತ್ತಗಳಲ್ಲಿ ಸಂಚರಿಸಿದ ನಂತರ ಜಿಲ್ಲಾ ಕ್ರೀಡಾಂಗಣ ತಲುಪಲಿದೆ. ಬೆಳಿಗ್ಗೆ 9ಕ್ಕೆ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸುವರು. ಕಾರ್ಯಕ್ರಮಕ್ಕೆ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಡ್ಡಾಯ ಹಾಜರಿರಬೇಕು ಎಂದರು.

ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಪೊಲೀಸ್ ಪಡೆ, ಗೃಹರಕ್ಷಕ ದಳ, ಭಾರತ ಸೇವಾದಳ ಹಾಗೂ ವಿವಿಧ ಶಾಲೆ ಹಾಗೂ ಕಾಲೇಜ್ ಗಳಿಂದ ಶಿಸ್ತು ಬದ್ಧವಾಗಿ ಪಥ ಸಂಚಲನ 2ನೇ ಪುಟಕ್ಕೆ

# ಮಹಾನಗರ ಪಾಲಿಕೆಯಿಂದ ವಕೀಲರನ್ನು ನೇಮಕಕ್ಕೆ ಅರ್ಜಿ ಆಹ್ವಾನ

ರಾಯಚೂರು ಅ. 17 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆಗೆ ಸಂಬಧಿಸಿದ ನ್ಯಾಯಾಲಯದ ಪ್ರಕರಣಗಳ ನಿರ್ವಹಣೆಗಾಗಿ ಬೆಂಗಳೂರಿನಲ್ಲಿ ಸ್ವಂತ ಕಚೇರಿ ಹೊಂದಿರುವ ಒಬ್ಬ ಅನುಭವಿ ವಕೀಲರನ್ನು ನೇಮಕ ಮಾಡಿಕೊಳ್ಳುವ ಸಲುವಾಗಿ ಅರ್ಹ ವಕೀಲರಿಂದ ಅರ್ಜಿ ಆಹ್ವಾನಿಸಲಾಗಿದೆ.

ಬೆಂಗಳೂರಿನಲ್ಲಿರುವ ವಿಶೇಷ ಭೂಕಬಳಿಕೆ ನ್ಯಾಯಾಲಯ, ಕಾರ್ಮಿಕ ನ್ಯಾಯಾಲಯ, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಲೋಕಾಯುಕ್ತ ಸಂಸ್ಥೆ ಹಾಗೂ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಮುಂತಾದ ನ್ಯಾಯಾಲಯಗಳು ಮತ್ತು ಪ್ರಾಧಿಕಾರಗಳಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಮಹಾನಗರ ಪಾಲಿಕೆಯ ಪರವಾಗಿ ವಾದ ಮಂಡಿಸಲು ಹಾಗೂ ಪ್ರಕರಣಗಳನ್ನು ಸಮರ್ಪಕವಾಗಿ ನಿರ್ವಹಿಸಲು ಅನುಭವವುಳ್ಳ ವಕೀಲರನ್ನು ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ.

ಅರ್ಜಿದಾರರಿಗೆ ಇರಬೇಕಾದ ಅರ್ಹತೆಗಳು ಮತ್ತು ಷರತ್ತುಗಳು: ರಾಯಚೂರು ಮಹಾನಗರ ಪಾಲಿಕೆಯ ಪರವಾಗಿ ಬೆಂಗಳೂರಿನ ವಿವಿಧ ನ್ಯಾಯಾಲಯಗಳು, ನ್ಯಾಯಾಧಿಕರಣಗಳು ಹಾಗೂ ತನಿಖಾ ಸಂಸ್ಥೆಗಳಲ್ಲಿ ದಾಖಲಾಗಿರುವ ಪ್ರಕರಣಗಳನ್ನು ನಿರ್ವಹಿಸಲು ಒಬ್ಬ ಹಿರಿಯ ವಕೀಲರನ್ನು ನೇಮಿಸಿಕೊಳ್ಳಲು ತಾತ್ವಿಕ ಅನುಮೋದನೆ ನೀಡಲಾಗಿದೆ.

ಆಯ್ಕೆಯಾಗುವ ವಕೀಲರು ಬೆಂಗಳೂರಿನಲ್ಲಿ ಸ್ವಂತ ಕಚೇರಿ ಹೊಂದಿರತಕ್ಕದ್ದು.ಬೆಗಳೂರಿನಲ್ಲಿ ಸ್ವಂತ ಕಚೇರಿ ಹೊಂದಿರಬೇಕು. ಕಚೇರಿಯ ವಿಳಾಸದ ದಾಖಲೆ ಸಲ್ಲಿಸಬೇಕು.

ಭೂ-ಕಬಳಿಕೆ, ನಾಗರಿಕ, ಕಾರ್ಮಿಕ, ಸ್ಥಳೀಯ ಸಂಸ್ಥೆಗಳ ಆಡಳಿತ ಹಾಗೂ ಕಾನೂನುಗಳಿಗೆ ಸಂಬಧಿಸಿದ ಪ್ರಕರಣಗಳಲ್ಲಿ ಸಮರ್ಪಕ ಅನುಭವ ಹೊಂದಿರತಕ್ಕದ್ದು.

ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ರಚಿಸಲಾದ ಆಯ್ಕೆ ಸಮಿತಿಯ ಮೂಲಕ ಸಂದರ್ಶನ ನಡೆಸಿ, ಅರ್ಹತೆ, ಅನುಭವ, ಕಾರ್ಯನಿರ್ವಹಣಾ ಸಾಮರ್ಥ್ಯ ಹಾಗೂ ನ್ಯಾಯಾಲಯದ ಅನುಭವದ ಆಧಾರದ ಮೇಲೆ ಪಾರದರ್ಶಕವಾಗಿ ಅಂತಿಮ ಆಯ್ಕೆ ಪ್ರಕ್ರಿಯೆ ನಡೆಸತಕ್ಕದ್ದು.

ಆಯ್ಕೆಯಾಗುವ ಹಿರಿಯ ವಕೀಲರಿಗೆ ಮಾಸಿಕ ರೂ.20,000/- ರಿಂದ ರೂ.30,000/-ರವರೆಗೆ ಗೌರವಧನ ಪಾವತಿಸಲು ಅನುಮತಿ ನೀಡಲಾಗಿದೆ. ಗೌರವಧನದ ನಿಖರ ಮೊತ್ತವನ್ನು ವಕೀಲರ ಅನುಭವ, ಅರ್ಹತೆ ಮತ್ತು ಕಾರ್ಯವ್ಯಾಪ್ತಿಯನ್ನು ಪರಿಗಣಿಸಿ ನಿಗದಿಪಡಿಸತಕ್ಕದ್ದು.

ಪ್ರಕರಣಗಳ ನಿರ್ವಹಣೆಗೆ ಸಂಬಧಿಸಿದ ನ್ಯಾಯಾಲಯ ಶುಲ್ಕ, ದಾಖಲೆಗಳ ತಯಾರಿಕೆ, ಪ್ರಯಾಣ ವೆಚ್ಚ ಹಾಗೂ ಇತರೆ ಅಗತ್ಯ ವೆಚ್ಚಗಳನ್ನು ರಾಯಚೂರು ಮಹಾನಗರ ಪಾಲಿಕೆಯ ನಿಧಿಯಿಂದ ಭರಿಸಲು ಅನುಮತಿ ನೀಡಲಾಗಿದೆ.

ಈ ನೇಮಕಾತಿಯು ಮೇಲ್ಕಂಡ ನ್ಯಾಯಾಲಯಗಳು ಮತ್ತುನ್ಯಾಯಾಧಿಕರಣಗಳಲ್ಲಿ ದಾಖಲಾಗಿರುವ ಹಾಗೂ ಮುಂದಿನ ದಿನಗಳಲ್ಲಿ ದಾಖಲಾಗುವ ಪ್ರಕರಣಗಳ ನಿರ್ವಹಣೆಗೆ ಮಾತ್ರ ಸೀಮಿತವಾಗಿರುತ್ತದೆ.

ಸದರಿ ನೇಮಕಾತಿಯು ರಾಜ್ಯ ಸರ್ಕಾರ, ನಗರಾಭಿವೃದ್ಧಿ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳ ಕುರಿತು ಕಾಲಕಾಲಕ್ಕೆ ಹೊರಡಿಸುವ ಆದೇಶಗಳು, ಮಾರ್ಗಸೂಚಿಗಳು ಹಾಗೂ ನಿಯಮಾವಳಿಗಳಿಗೆ ಒಳಪಟ್ಟಿರುತ್ತದೆ.

ಅರ್ಜಿ ಸಲ್ಲಿಸುವ ವಿಧಾನ: ಆಸಕ್ತ ಮತ್ತು ಅರ್ಹ ವಕೀಲರು ತಮ್ಮ ಸಂಪೂರ್ಣ ವೃತ್ತಿಪರ ವಿವರಗಳು, ಕಾನೂನು ಪದವಿ ಪ್ರಮಾಣ ಪತ್ರ, ವಕೀಲರ ನೋಂದಣಿ ಪ್ರಮಾಣಪತ್ರ, ಅನುಭವದ ದಾಖಲೆಗಳು, ಬೆಂಗಳೂರಿನ ಕಚೇರಿಯ ವಿಳಾಸದ ದಾಖಲೆ ಹಾಗೂ ಈ ಹಿಂದೆ ನಿರ್ವಹಿಸಿದ ಪ್ರಮುಖ ಪ್ರಕರಣಗಳ ವಿವರಗಳೊಂದಿಗೆ ಅರ್ಜಿಯನ್ನು ಅಕ್ಟೋಬರ್ 23ರೊಳಗಾಗಿ ಆಯುಕ್ತರು, ರಾಯಚೂರು ಮಹಾನಗರ ಪಾಲಿಕೆ, ರಾಯಚೂರು ಇವರಿಗೆ ಸಲ್ಲಿಸತಕ್ಕದ್ದು.

ನಿಗದಿತ ದಿನಾಂಕದ ನಂತರ ಸ್ವೀಕತವಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ, ಅರ್ಹತೆ ಮತ್ತು ಅನುಭವದ ಆಧಾರದ ಮೇಲೆ ವಕೀಲರನ್ನು ಆಯ್ಕೆ ಮಾಡುವ ಹಕ್ಕನ್ನು ರಾಯಚೂರು ಮಹಾನಗರ ಪಾಲಿಕೆಯು ಕಾಯ್ದಿರಿಸಿಕೊಂಡಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೇನುಗಾರಿಕೆ ತರಬೇತಿ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

ರಾಯಚೂರು ಅ. 17 (ಕರ್ನಾಟಕ ವಾರ್ತೆ): ತೋಟಗಾರಿಕೆ ಇಲಾಖೆಯ ವತಿಯಿಂದ 2026-27ನೇ ಸಾಲಿನಲ್ಲಿ ಬೀಳಗಿ ಜೇನುಗಾರಿಕೆ ತರಬೇತಿ ಕೇಂದ್ರ ಸಿದ್ದಾಪುರ ತಾಲೂಕು, ಉತ್ತರ ಕನ್ನಡ ಜಿಲ್ಲೆಯಲ್ಲಿ 3 ತಿಂಗಳ ಜೇನುಗಾರಿಕೆ ತರಬೇತಿ ದಿನಾಂಕ 04-11-2026 ರಿಂದ 03-02-2027 ರವರೆಗೆ ನಡೆಯಲಿದ್ದು, ಆಸಕ್ತ ಪುರುಷ ರೈತರು ಹಾಗೂ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಯನ್ನು ತೋಟಗಾರಿಕೆ ಜಂಟಿ ನಿರ್ದೇಶಕರ ಕಚೇರಿಗೆ ಸಲ್ಲಿಸಲು ಕೊನೆಯ ದಿನಾಂಕ: 30-10-2026ರೊಳಗಾಗಿ ಸಲ್ಲಿಸಬಹುದಾಗಿದೆ.

ಅರ್ಜಿ ಶುಲ್ಕ, ತರಬೇತಿಗೆ ಅರ್ಹತೆ, ಕರಾರು ಪತ್ರ, ಭದ್ರತಾ ಠೇವಣಿ ಇತರೆ ನಿಯಮಗಳ ವಿವರವನ್ನು ಅರ್ಜಿಯೊಂದಿಗೆ ಲಗತ್ತಿಸಿರುವ ಸುತ್ತೋಲೆಯಲ್ಲಿ ನೀಡಲಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಜಂಟಿ ನಿರ್ದೇಶಕರ ಕಚೇರಿ(ಜಿಪಂ) ರಾಯಚೂರು ಕಚೇರಿಯನ್ನು ಸಂಪರ್ಕಿಸಬಹುದು ಅಥವಾ ಇಲಾಖೆಯ ಅಧಿಕೃತ ವೆಬ್ಸೈಟ್ https://horticulturedir.karnataka.gov.in ಅನ್ನು ನೋಡಬಹುದಾಗಿದೆ ಎಂದು ರಾಯಚೂರಿನ ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

ಲೌಕಿಕ ಸಂಬಂಧಗಳು ನಮ್ಮನ್ನು ಕಟ್ಟಿ ಹಾಕುತ್ತವೆ, ಆಧ್ಯಾತ್ಮಿಕ ಸಂಬಂಧಗಳು ನಮ್ಮನ್ನು ಸ್ವತಂತ್ರವಾಗಿರಿಸುತ್ತವೆ.

1619 ನೇಯ ದಿನಕ್ಕೆ ಏಮ್ಸ್ ಹೋರಾಟ

# ಮಾಹಿತಿ ಆಯೋಗದ ಪೀಠದಲ್ಲಿ 3,694 ಪ್ರಕರಣಗಳ ಇತ್ಯರ್ಥ, 80 ಅಧಿಕಾರಿಗಳಿಗೆ ₹7.78 ಲಕ್ಷ ದಂಡ: ಬಿ. ವೆಂಕಟಸಿಂಗ್



ಕಲಬುರಗಿ: ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ 188 ದಿನಗಳ ಕಾಲ ವಿಚಾರಣೆ ನಡೆಸಿ 3,694 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಮಾಹಿತಿ ಒದಗಿಸುವಲ್ಲಿ ವಿಳಂಬ ಹಾಗೂ ನಿಯಮಗಳ ಉಲ್ಲಂಘನೆ ಹಿನ್ನೆಲೆಯಲ್ಲಿ 80 ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಒಟ್ಟು ₹7.78 ಲಕ್ಷ ದಂಡ ವಿಧಿಸಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತ ಬಿ. ವೆಂಕಟಸಿಂಗ್ ತಿಳಿಸಿದರು.

ಅಕ್ಟೋಬರ್ 16ರಂದು ಕಲಬುರಗಿ ಪೀಠದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ತಮ್ಮ ಒಂದು ವರ್ಷದ ಅಧಿಕಾರಾವಧಿಯ ಕಾರ್ಯನಿರ್ವಹಣೆಯ ವಿವರಗಳನ್ನು ನೀಡಿದ ಅವರು, ಸಾರ್ವಜನಿಕರಿಗೆ ಮಾಹಿತಿ ಹಕ್ಕು ಕಾಯ್ದೆಯಡಿ ಅಗತ್ಯ ಮಾಹಿತಿ ದೊರಕಿಸಿಕೊಡುವುದು ಹಾಗೂ ದೀರ್ಘಕಾಲದಿಂದ ಬಾಕಿ ಉಳಿದಿರುವ ಮೇಲ್ಮನವಿ ಪ್ರಕರಣಗಳಿಗೆ ನ್ಯಾಯಯುತ ಪರಿಹಾರ ಕಲ್ಪಿಸಲು ಆದ್ಯತೆ ನೀಡಲಾಗಿದೆ ಎಂದರು.

2025ರ ನವೆಂಬರ್ 25ರಿಂದ ಪ್ರಕರಣಗಳ ವಿಚಾರಣೆ ಆರಂಭಿಸಲಾಗಿದ್ದು, ಈವರೆಗೆ 188 ದಿನಗಳ ವಿಚಾರಣೆಯಲ್ಲಿ ಒಟ್ಟು 7,262 ಪ್ರಕರಣಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇವುಗಳಲ್ಲಿ 3,694 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ನಿಗದಿತ ಅವಧಿಯಲ್ಲಿ ಅರ್ಜಿದಾರರಿಗೆ ಮಾಹಿತಿ ಒದಗಿಸಲು ವಿಫಲರಾದ ವಿವಿಧ ಇಲಾಖೆಗಳ 80 ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ₹7,78,000 ದಂಡ ವಿಧಿಸಿದ್ದು, ಅದರಲ್ಲಿ ₹7,37,000 ವಸೂಲಿ ಮಾಡಲಾಗಿದೆ ಎಂದು ವಿವರಿಸಿದರು.

ಮಾಹಿತಿ ಪಡೆಯಲು ಅರ್ಜಿ ಸಲ್ಲಿಸಿದರೂ ಸಕಾಲಕ್ಕೆ ಉತ್ತರ ದೊರೆಯದ ಕಾರಣ ಸಮಯ ಹಾಗೂ ಹಣ ವ್ಯರ್ಥ ಮಾಡಿಕೊಂಡ 35 ಮೇಲ್ಮನವಿದಾರರಿಗೆ ಒಟ್ಟು ₹96,000 ಪರಿಹಾರ ನೀಡುವಂತೆ ಆಯೋಗ ಆದೇಶಿಸಿದೆ. ಮಾಹಿತಿ ಹಕ್ಕು ಕಾಯ್ದೆಯಡಿ ಸಾರ್ವಜನಿಕರಿಗೆ ಮಾಹಿತಿ ನೀಡುವುದು ಅಧಿಕಾರಿಗಳ ಕಾನೂನುಬದ್ಧ ಕರ್ತವ್ಯವಾಗಿದ್ದು, ಈ ಜವಾಬ್ದಾರಿಯನ್ನು ನಿರ್ಲಕ್ಷಿಸುವವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಲಬುರಗಿ ಪೀಠದ ವ್ಯಾಪ್ತಿಯಲ್ಲಿ ಈವರೆಗೆ ಒಟ್ಟು 20,398 ದ್ವಿತೀಯ ಮೇಲ್ಮನವಿ ಪ್ರಕರಣಗಳು ದಾಖಲಾಗಿವೆ. ಈ ಪೈಕಿ 13,468 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದ್ದು, ಪ್ರಸ್ತುತ 6,930 ಪ್ರಕರಣಗಳು ವಿಚಾರಣೆಗೆ ಬಾಕಿ ಉಳಿದಿವೆ. ಹಿಂದೆ ದ್ವಿತೀಯ ಮೇಲ್ಮನವಿ ಸಲ್ಲಿಸಲು ಬೆಂಗಳೂರಿಗೆ ತೆರಳಬೇಕಾಗಿತ್ತು. ಆದರೆ 2026ರ ಫೆಬ್ರವರಿಯಿಂದ ಕಲಬುರಗಿ ಪೀಠದಲ್ಲಿಯೇ ಅರ್ಜಿಗಳನ್ನು ಸ್ವೀಕರಿಸುವ ವ್ಯವಸ್ಥೆ ಆರಂಭಿಸಲಾಗಿದ್ದು, ಇಲ್ಲಿಯವರೆಗೆ 2,432 ದ್ವಿತೀಯ ಮೇಲ್ಮನವಿ ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಮಾಹಿತಿ ನೀಡಿದರು.

ಜಿಲ್ಲಾವಾರು ಬಾಕಿ ಪ್ರಕರಣಗಳ ವಿವರ ನೀಡಿದ ಅವರು, ರಾಯಚೂರು ಜಿಲ್ಲೆಯಲ್ಲಿ ಅತಿ ಹೆಚ್ಚು 2,059 ಪ್ರಕರಣಗಳು ವಿಚಾರಣೆಗೆ ಬಾಕಿ ಇವೆ. ಕಲಬುರಗಿಯಲ್ಲಿ 1,483, ಬಳ್ಳಾರಿಯಲ್ಲಿ 885, ಯಾದಗಿರಿಯಲ್ಲಿ 665, ಕೊಪ್ಪಳದಲ್ಲಿ 649, ವಿಜಯನಗರದಲ್ಲಿ 629 ಹಾಗೂ ಬೀದರ್ ಜಿಲ್ಲೆಯಲ್ಲಿ 560 ಪ್ರಕರಣಗಳು ಸೇರಿದಂತೆ ಒಟ್ಟು 6,930 ಪ್ರಕರಣಗಳು ಬಾಕಿ ಉಳಿದಿವೆ ಎಂದು ತಿಳಿಸಿದರು.

ತಾವು ಅಧಿಕಾರ ವಹಿಸಿಕೊಂಡ ನಂತರ ಗ್ರಾಮ ಪಂಚಾಯಿತಿಗಳಿಗೆ ಸಂಬಂಧಿಸಿದ ಮಾಹಿತಿ ಹಕ್ಕು ಅರ್ಜಿಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗಿರುವುದು ಗಮನಕ್ಕೆ ಬಂದಿದೆ. ಇಂತಹ ಪ್ರಕರಣಗಳನ್ನು ಆದ್ಯತೆಯ ಮೇರೆಗೆ ವಿಚಾರಣೆಗೆ ಕೈಗೆತ್ತಿಕೊಂಡು ಅರ್ಜಿದಾರರಿಗೆ ಮಾಹಿತಿ ಲಭ್ಯವಾಗುವಂತೆ ಕ್ರಮವಹಿಸಲಾಗಿದೆ. ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರಗಳ ಅಧಿಕಾರಿಗಳಿಗೆ ಕಾಯ್ದೆಯ ಅನುಷ್ಠಾನದ ಸಂದರ್ಭದಲ್ಲಿ ಎದುರಾಗುವ ಗೊಂದಲಗಳನ್ನು ನಿವಾರಿಸಲು ಕಲಬುರಗಿ ಪೀಠದ ವ್ಯಾಪ್ತಿಯ ಏಳು ಜಿಲ್ಲೆಗಳಲ್ಲಿ ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ ಎಂದರು.

ಕಲ್ಯಾಣ ಕರ್ನಾಟಕ ಭಾಗದ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ 2024ರಲ್ಲಿ ಕಲಬುರಗಿ ಪೀಠ ಕಾರ್ಯಾರಂಭ ಮಾಡಿದೆ. ಪ್ರಸ್ತುತ ಲೋಕೋಪಯೋಗಿ ಇಲಾಖೆಗೆ ಸೇರಿದ ಕಟ್ಟಡದಲ್ಲಿ ಆಯೋಗದ ಕಚೇರಿ ಕಾರ್ಯನಿರ್ವಹಿಸುತ್ತಿದೆ. ಪೀಠಕ್ಕೆ ಶಾಶ್ವತ ಕಟ್ಟಡ ನಿರ್ಮಿಸಲು ಸೂಕ್ತ ನಿವೇಶನ ಮಂಜೂರು ಮಾಡುವಂತೆ ಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಪತ್ರ ಬರೆಯಲಾಗಿದ್ದು, ಈ ಸಂಬಂಧ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಹೇಳಿದರು.

ಆಯೋಗದ ಕಾರ್ಯನಿರ್ವಹಣೆಗೆ ಅಗತ್ಯ ಸಿಬ್ಬಂದಿಯ ಕೊರತೆಯಿದ್ದು, ಹೆಚ್ಚುವರಿ ಸಿಬ್ಬಂದಿ ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅಗತ್ಯ ಮಾನವ ಸಂಪನ್ಮೂಲ ಲಭ್ಯವಾದಲ್ಲಿ ಹೆಚ್ಚಿನ ಪ್ರಕರಣಗಳನ್ನು ವಿಚಾರಣೆಗೆ ಕೈಗೆತ್ತಿಕೊಂಡು ಶೀಘ್ರ ವಿಲೇವಾರಿ ಮಾಡಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಳೆದ ವರ್ಷದ ಅವಧಿಯಲ್ಲಿ ಹಲವು ಮಹತ್ವದ ಪ್ರಕರಣಗಳ ವಿಚಾರಣೆ ನಡೆಸಲಾಗಿದೆ. ಕಲಬುರಗಿ-ಯಾದಗಿರಿ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ಗೆ ಸಂಬಂಧಿಸಿದ ಮೇಲ್ಮನವಿಯ ವಿಚಾರಣೆ ನಡೆಸಿ, ಸದರಿ ಬ್ಯಾಂಕ್ ಸಾರ್ವಜನಿಕ ಪ್ರಾಧಿಕಾರದ ವ್ಯಾಪ್ತಿಗೆ ಬರುತ್ತದೆ ಎಂದು ಆಯೋಗ ಆದೇಶಿಸಿರುವುದು ಪ್ರಮುಖ ಬೆಳವಣಿಗೆಯಾಗಿದೆ. ಅಲ್ಲದೆ, 2010ರಿಂದ 2022ರ ಅವಧಿಗೆ ಸಂಬಂಧಿಸಿದಂತೆ ಹಲವು ವರ್ಷಗಳಿಂದ ಇತ್ಯರ್ಥವಾಗದೆ ಉಳಿದಿದ್ದ 500ಕ್ಕೂ ಹೆಚ್ಚು ಹಳೆಯ ಪ್ರಕರಣಗಳನ್ನು ವಿಚಾರಣೆ ನಡೆಸಿ ವಿಲೇವಾರಿ ಮಾಡಲಾಗಿದೆ ಎಂದು ವಿವರಿಸಿದರು.

ರಾಯಚೂರು ಜಿಲ್ಲೆಯ ಸಿರವಾರ ಪೊಲೀಸ್ ಠಾಣೆಗೆ ಸಂಬಂಧಿಸಿದ ಸಿಸಿಟಿವಿ ದೃಶ್ಯಾವಳಿಗಳ ಮಾಹಿತಿ ನೀಡುವಲ್ಲಿ ವಿಳಂಬ ಮಾಡಿದ ಪ್ರಕರಣದ ಕುರಿತು ಮಾತನಾಡಿದ ಅವರು, ಅರ್ಜಿದಾರರು ಕೋರಿದ್ದ ಮಾಹಿತಿಯನ್ನು ನಿಗದಿತ ಅವಧಿಯಲ್ಲಿ ಒದಗಿಸದ ಹಿನ್ನೆಲೆಯಲ್ಲಿ ಠಾಣೆಯಲ್ಲಿ ಕಾರ್ಯನಿರ್ವಹಿಸಿದ್ದ ಮೂವರು ಪೊಲೀಸ್ ಸಬ್‌ಇನ್ಸ್ಪೆಕ್ಟರ್‌ಗಳಿಗೆ ತಲಾ ₹25 ಸಾವಿರದಂತೆ ಒಟ್ಟು ₹75 ಸಾವಿರ ದಂಡ ವಿಧಿಸಿ ವಸೂಲಿ ಮಾಡಲಾಗಿದೆ ಎಂದು ತಿಳಿಸಿದರು.

ಈ ಮೂವರು ಪಿಎಸ್‌ಐಗಳ ವಿರುದ್ಧ ಇಲಾಖಾ ಕ್ರಮಕ್ಕೆ ಆಯೋಗ ಶಿಫಾರಸು ಮಾಡಿದ್ದು, ಅದರಂತೆ ಪೊಲೀಸ್ ನಿಯಮಗಳ ರೂಲ್ 7ರ ಅಡಿಯಲ್ಲಿ ಸಂಬಂಧಪಟ್ಟ ಪೊಲೀಸ್ ವರಿಷ್ಠಾಧಿಕಾರಿಗಳು ನೋಟಿಸ್ ಜಾರಿಗೊಳಿಸಿರುವುದಾಗಿ ಆಯೋಗಕ್ಕೆ ಮಾಹಿತಿ ನೀಡಿದ್ದಾರೆ ಎಂದು ಹೇಳಿದರು.

ಇದಲ್ಲದೆ, ಕೆಲವು ಮೇಲ್ಮನವಿ ಪ್ರಕರಣಗಳಲ್ಲಿ ಹೆಚ್ಚಿನ ತನಿಖೆ ಅಗತ್ಯವೆಂದು ಕಂಡುಬಂದ ಹಿನ್ನೆಲೆಯಲ್ಲಿ ಆಯೋಗಕ್ಕೆ ಇರುವ ಅಧಿಕಾರವನ್ನು ಬಳಸಿಕೊಂಡು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಗಳಿಂದ ವಿಚಾರಣಾ ವರದಿ ಕೇಳಲಾಗಿದೆ. ವರದಿಗಳು ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಇನ್ನೂ ಎರಡು ಮಹತ್ವದ ಪ್ರಕರಣಗಳ ವಿಚಾರಣೆ ಪೂರ್ಣಗೊಂಡಿದ್ದು, ಅಂತಿಮ ಆದೇಶ ಹೊರಡಿಸಿದ ಬಳಿಕ ಅವುಗಳ ವಿವರಗಳನ್ನು ಬಹಿರಂಗಪಡಿಸಲಾಗುವುದು ಎಂದು ಬಿ. ವೆಂಕಟಸಿಂಗ್ ತಿಳಿಸಿದರು.

# ನಂದಿಹಾಳ ಹಳ್ಳಕ್ಕೆ ನೀರು ಹರಿಸಲು ಆಗ್ರಹಿಸಿ ಗ್ರಾಮಸ್ಥರಿಂದ ಅನಿರ್ದಿಷ್ಟಾವಧಿ ಪ್ರತಿಭಟನೆ

ಮಾನ್ವಿ: ತಾಲೂಕಿನ ಗೊಲ್ಲದಿನ್ನಿ ಎಸ್ಕೇಪ್ ಮೂಲಕ ನಂದಿಹಾಳ ಹಳ್ಳಕ್ಕೆ ನೀರು ಹರಿಸಿ ಜನರು ಹಾಗೂ ಜಾನುವಾರುಗಳಿಗೆ ಎದುರಾಗಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸುವಂತೆ ಆಗ್ರಹಿಸಿ ವಿವಿಧ ಗ್ರಾಮಗಳ ರೈತರು ಮತ್ತು ಗ್ರಾಮಸ್ಥರು ನಂದಿಹಾಳ ಗ್ರಾಮದ ಸಮೀಪದ ರಾಜ್ಯ ಹೆದ್ದಾರಿಯಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ, ತಾಲೂಕಿನಲ್ಲಿ ಮಳೆಯ ಕೊರತೆಯಿಂದ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಕುಡಿಯುವ ನೀರಿಗೂ ಜನರು ಪರದಾಡುವಂತಾಗಿದೆ. ಇಂತಹ ಸಂಕಷ್ಟದ ಸಂದರ್ಭದಲ್ಲಿಯೂ ಜನರ ನ್ಯಾಯಯುತ ಬೇಡಿಕೆಗೆ ಸ್ಪಂದಿಸಿ ನೀರು ಒದಗಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಾನ್ವಿ ಪಟ್ಟಣ ಸೇರಿದಂತೆ ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ದಿನದಿಂದ ದಿನಕ್ಕೆ ಉಲ್ಬಣಿಸುತ್ತಿದೆ. ಜನರೊಂದಿಗೆ ಜಾನುವಾರುಗಳಿಗೂ ನೀರಿನ ಕೊರತೆ ಎದುರಾಗಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಬೇಕು. ಜಿಲ್ಲಾಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಗೊಲ್ಲದಿನ್ನಿ ಎಸ್ಕೇಪ್ ಮೂಲಕ ನಂದಿಹಾಳ ಹಳ್ಳಕ್ಕೆ ತಕ್ಷಣ ನೀರು ಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಗ್ರಾಮಸ್ಥರ ಅಹವಾಲು ಆಲಿಸಿ ಮಾತನಾಡಿ, ಅಕ್ಟೋಬರ್ 19ರಂದು ನಡೆಯಲಿರುವ ಎರಡನೇ ಐಸಿಸಿ ಸಭೆಯಲ್ಲಿ ನಂದಿಹಾಳ ಹಾಗೂ ಪೋತ್ನಾಳ ಹಳ್ಳಗಳಿಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ನೀರು ಹರಿಸುವ ವಿಷಯವನ್ನು ಪ್ರಸ್ತಾಪಿಸಲಾಗುವುದು ಎಂದು ತಿಳಿಸಿದರು.

ಈ ಎರಡೂ ಹಳ್ಳಗಳಿಗೆ ನೀರು ಹರಿಸುವುದರಿಂದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಳವಾಗುವುದರ ಜೊತೆಗೆ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಅನುಕೂಲವಾಗಲಿದೆ. ಈ ಸಂಬಂಧ ಜಿಲ್ಲಾಧಿಕಾರಿಗಳ ಮೂಲಕ ಸಭೆಗೆ ಪ್ರಸ್ತಾವನೆ ಸಲ್ಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಪ್ರಯತ್ನಿಸಲಾಗುವುದು. ಸಿರವಾರ ನೀರಾವರಿ ಇಲಾಖೆ ವಿಭಾಗದಿಂದಲೂ ಪ್ರತ್ಯೇಕ ಪ್ರಸ್ತಾವನೆ ಸಲ್ಲಿಸಲು ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ರಾಜ್ಯ ಸರ್ಕಾರವು ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿದ್ದು, ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಕಂದಾಯ ಇಲಾಖೆಗೆ ಅಗತ್ಯ ಅನುದಾನ ಒದಗಿಸಿದೆ. ನೀರಿನ ಅಭಾವ ತೀವ್ರವಾಗಿರುವ ಗ್ರಾಮಗಳನ್ನು ಗುರುತಿಸಿ ತಾತ್ಕಾಲಿಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದು. ಗ್ರಾಮಸ್ಥರ ಬೇಡಿಕೆಯನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಶೀಘ್ರ ಪರಿಹಾರಕ್ಕೆ ಕ್ರಮ ವಹಿಸಲಾಗುವುದು ಎಂದು ತಹಶೀಲ್ದಾರ್ ವಿವರಿಸಿದರು.

ಈ ಸಂದರ್ಭದಲ್ಲಿ ಶಿವಶಂಕ್ರಯ್ಯ ಸ್ವಾಮಿ, ತಿಮ್ಮರೆಡ್ಡಿ ಭೋಗಾವತಿ ಹಾಗೂ ಶರಣಪ್ಪ ನಕ್ಕುಂದಿ ಮಾತನಾಡಿ, ನಂದಿಹಾಳ ಹಳ್ಳಕ್ಕೆ ನೀರು ಹರಿಸುವುದರಿಂದ ಸುತ್ತಮುತ್ತಲಿನ ಹಲವು ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ದೊರೆಯಲಿದೆ. ಅಧಿಕಾರಿಗಳು ಕೇವಲ ಭರವಸೆ ನೀಡದೆ ನೀರು ಹರಿಸಲು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಜಾನೇಕಲ್, ಅಮರಾವತಿ, ನಸ್ಲಾಪುರ, ನಂದಿಹಾಳ, ರಾಜಲದಿನ್ನಿ, ಯರಮಲದೊಡ್ಡಿ, ಮುಸ್ಟೂರು, ರಂಗದಾಳ ಹಾಗೂ ಬುದ್ದಿನ್ನಿ ಗ್ರಾಮಗಳ ನೂರಾರು ರೈತರು ಮತ್ತು ಗ್ರಾಮಸ್ಥರು ಭಾಗವಹಿಸಿ ತಮ್ಮ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜಾ ರಾಮಚಂದ್ರನಾಯಕ, ಶ್ರೀಧರಸ್ವಾಮಿ, ಮೌನೇಶಗೌಡ ಹೆಚ್., ವೀರಭದ್ರಗೌಡ ಭೋಗಾವತಿ, ಶರಣಬಸವ ನಸ್ಲಾಪುರ, ಜಗದೀಶ ಓತ್ತೂರು, ರಾಮನಗೌಡ ನಂದಿಹಾಳ, ನಬೀಸಾಬ್, ಅಮರೇಶಗೌಡ ಪೊ. ಪಾಟೀಲ್, ಚನ್ನಬಸವ, ಹುಸೇನಪ್ಪ, ರವಿಕುಮಾರ ಪಾಟೀಲ್, ಈರಯ್ಯ ಪೂಜಾರಿ, ಶಿವಣ್ಣ, ಶರಣಬಸಪ್ಪಗೌಡ, ರಾಜಾ ವಿರೂಪಾಕ್ಷಯ್ಯ ಸ್ವಾಮಿ, ಮಲ್ಲಯ್ಯ ಸ್ವಾಮಿ, ರಮೇಶ, ಶೇಷಾರೆಡ್ಡಿ, ಮಧುಸೂಧನ್ ರೆಡ್ಡಿ, ಅಂಜಿನಯ್ಯನಾಯಕ, ಲಕ್ಷ್ಮೀರೆಡ್ಡಿ, ಎಸ್.ವಿ. ರಾಮಕೃಷ್ಣ, ವಿಠೋಬನಾಯಕ ಸೇರಿದಂತೆ ವಿವಿಧ ಗ್ರಾಮಗಳ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಕಲ್ಯಾಣ ಕರ್ನಾಟಕದ ಶೈಕ್ಷಣಿಕ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಬದ್ಧ: ಎನ್.ಎಸ್. ಬೋಸರಾಜು

ಶ್ರಮಿಸುವುದಾಗಿ ತಿಳಿಸಿದರು.

ಪೂರ್ಣಿಮಾ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾದ ಕೇಶವ ರೆಡ್ಡಿ ಮತ್ತು ನಾಗಿರೆಡ್ಡಿ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಶಾಲಾ ಕಟ್ಟಡ ನಿರ್ಮಾಣಕ್ಕೆ ಗ್ರಾಮ ಪಂಚಾಯಿತಿಗಳಿಂದ ವಿವಿಧ ದಾಖಲೆಗಳನ್ನು ಕೇಳಲಾಗುತ್ತಿದೆ. ಹಳೆಯ ಆಸ್ತಿಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸುವುದು ಕಷ್ಟವಾಗುತ್ತಿರುವುದರಿಂದ ಕಟ್ಟಡ ನಿರ್ಮಾಣಕ್ಕೆ ಅನುಮತಿ ಪಡೆಯಲು ತೊಂದರೆಯಾಗುತ್ತಿದೆ ಎಂದು ವಿವರಿಸಿದರು.

ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಅಗತ್ಯ ಅನುಮತಿ ನೀಡುವ ಪ್ರಕ್ರಿಯೆಯನ್ನು ಸರಳಗೊಳಿಸಬೇಕು. ಕುಡಿಯುವ ನೀರಿನ ಸಂಪರ್ಕ ಸೇರಿದಂತೆ ಮೂಲಸೌಕರ್ಯಗಳನ್ನು ತ್ವರಿತವಾಗಿ ಒದಗಿಸಬೇಕು. ಶಿಕ್ಷಣ ಸಂಸ್ಥೆಗಳಿಗೆ ಅನಗತ್ಯ ಆಡಳಿತಾತ್ಮಕ ತೊಂದರೆಗಳು ಎದುರಾಗದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ. ಶಾಂತಪ್ಪ ಮಾತನಾಡಿ, ಶಿಕ್ಷಣ ಕ್ಷೇತ್ರದ ಸಮಸ್ಯೆಗಳಿಗೆ ಸ್ಪಂದಿಸುವುದು, ಶಾಲೆಗಳ ಅಭಿವೃದ್ಧಿಗೆ ಅನುದಾನ ಒದಗಿಸುವುದು ಹಾಗೂ ಶಿಕ್ಷಕ-ಉಪನ್ಯಾಸಕರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವುದು ಕಾಂಗ್ರೆಸ್ ಸರ್ಕಾರದ ಆದ್ಯತೆಯಾಗಿದೆ. ಶಿಕ್ಷಕರ ಸಮಸ್ಯೆಗಳಿಗೆ ಧ್ವನಿಯಾಗುವ ಶರಣಪ್ಪ ಮಟ್ಟೂರು ಅವರ ಗೆಲುವಿಗೆ ಎಲ್ಲರೂ ಸಹಕರಿಸಬೇಕು ಎಂದು ಕೋರಿದರು.

ಕಾಂಗ್ರೆಸ್ ಮುಖಂಡ ಜಯಣ್ಣ ಪ್ರಾಸ್ತಾವಿಕವಾಗಿ ಮಾತನಾಡಿ, ಸಭೆಗೆ ಆಗಮಿಸಿದ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರನ್ನು ಸ್ವಾಗತಿಸಿದರು. ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಶರಣಪ್ಪ ಮಟ್ಟೂರು ಅವರನ್ನು ಬೆಂಬಲಿಸಿ ಗೆಲ್ಲಿಸಲು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಕಾಂಗ್ರೆಸ್ ಮುಖಂಡರಾದ ಜಯಣ್ಣ, ಮೊಹಮ್ಮದ್ ಶಾಲಂ, ಜಿ. ಶಿವಮೂರ್ತಿ, ಜಯವಂತರಾವ್ ಪತಂಗೆ, ರುದ್ರಪ್ಪ ಅಂಗಡಿ, ದರೂರ್ ಬಸವರಾಜ ಹಾಗೂ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರಾದ ಅಬ್ದುಲ್ ಹೈ ಫಿರೋಜ್, ಜುಬೇರ್ ವೆಂಕಟೇಶ್, ವೆಂಕಟೇಶ್ ಮಿರ್ಜಾಪುರ, ಮುರಳೀಧರ್, ರಾಮಾಂಜನೇಯಲು, ಇಕ್ಬಾಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸರಳ, ಅರ್ಥಪೂರ್ಣವಾಗಿ ಜಯಂತಿ ಆಚರಣೆ: ಜಿಲ್ಲಾಧಿಕಾರಿ ಪೂವಿತಾ ಎಸ್.

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತ್ಸಾಹಿಸುವ ಮೂಲಕ ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವುದರಿಂದ ಅವರ ಮುಂದಿನ ವಿದ್ಯಾಭ್ಯಾಸಕ್ಕೆ ಉತ್ತೇಜನ ಸಿಗಲಿದೆ. ಇಂತಹ ಸನ್ಮಾನ ಇತರ ವಿದ್ಯಾರ್ಥಿಗಳಿಗೂ ಪ್ರೇರಣೆಯಾಗಲಿದೆ. ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸುವ ಕಾರ್ಯಕ್ಕೆ ಜಯಂತಿ ಕಾರ್ಯಕ್ರಮದಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ., ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತೆ ಸಂತೋಷ ರಾಣಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸರಸ್ವತಿ, ರಾಯಚೂರು ಸಹಾಯಕ ಆಯುಕ್ತರ ಕಚೇರಿಯ ತಹಶಿಲ್ದಾರ್ ರಾಜಶೇಖರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಸೇರಿದಂತೆ ವಾಲ್ಮೀಕಿ ಸಮಾಜದ ಮುಖಂಡರು, ವಕೀಲರು, ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

# ತರಬೇತಿಯಲ್ಲಿ ನೀಡಲಾದ ಮಾರ್ಗಸೂಚಿಗಳನ್ನು ಪಾಲಿಸಿ: ಜಿಲ್ಲಾಧಿಕಾರಿ ಪೂವಿತಾ

ಅತ್ಯಗತ್ಯವಾಗಿದೆ ಎಂದರು.

ಕೇವಲ ಮಾತಿಗೆ ಅಥವಾ ಸೂಚನೆಗೆ ಮಾತ್ರ ಸೀಮಿತಗೊಳ್ಳದೆ, ಪ್ರತಿ ಆರು ತಿಂಗಳಿಗೊಮ್ಮೆ ನಿಯಮಿತವಾಗಿ ಇಂತಹ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲು ನಿರ್ಧರಿಸಲಾಗಿದೆ. ಅಲ್ಲದೆ, ಉತ್ತಮ ಕಾರ್ಯಕ್ಷಮತೆ ಹೊಂದಿರುವ ಹಾಸ್ಟೆಲ್‌ಗಳನ್ನು ಗುರುತಿಸಿ, ಅಲ್ಲಿನ ಸಿಬ್ಬಂದಿಯನ್ನು ಇತರರಿಗೆ ಮಾದರಿಯಾಗಿ ಪರಿಚಯಿಸಲು ತರಬೇತಿ ನೀಡಲಾಗುವುದು ಎಂದರು.

ಯಾವುದೇ ಹಂತದಲ್ಲಿಯೂ ಸಿಬ್ಬಂದಿಯಿದ ನಿರ್ಲಕ್ಷ್ಯ ಅಥವಾ ತಪ್ಪುಗಳು ಆಗಬಾರದು. ಒಂದು ವೇಳೆ ದೂರುಗಳು ಬಂದರೆ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು, ಯಾವುದೇ ದೂರುಗಳು ಇಲ್ಲದಿದ್ದರೆ ಇಲಾಖೆಯಿಂದ ಸಂಪೂರ್ಣ ಬೆಂಬಲವಿರುತ್ತದೆ.

ಇದೇ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್., ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ವಸತಿ ಶಾಲೆಯ ಪ್ರಾಂಶುಪಾಲರು, ನಿಲಯ ಪಾಲಕರು, ಅಡುಗೆ ಸಿಬ್ಬಂದಿಗಳು, ಸಹಾಯಕರು ಇದ್ದರು.

# ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳು ಸೂಚನೆ: ಜಿಲ್ಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆಯಾಗಲಿ

ನಡೆಯಲಿದೆ. ನಂತರ ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನಡೆಯುವಂತೆ ಕ್ರಮವಹಿಸಬೇಕು. ಶಿಷ್ಟಾಚಾರದ ಅನ್ವಯ ಆಸನದ ವ್ಯವಸ್ಥೆಗೆ ಕ್ರಮ ವಹಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಶಾಲಾಕಾಲೇಜು ವಿದ್ಯಾರ್ಥಿಗಳು, ಸಂಘಸಸ್ಥೆಯವರು ಆಸಕ್ತಿಯಿಂದ ಭಾಗವಹಿಸುವಂತೆ ಪ್ರೇರೇಪಿಸಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಗಣ್ಯರಿಗೆ ಪ್ರಶಸ್ತಿ: ಕರ್ನಾಟಕ ರಾಜ್ಯೋತ್ಸವ-2026ರ ಅಂಗವಾಗಿ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲೆಯ ರಾಯಚೂರು ನಗರ, ರಾಯಚೂರು ಗ್ರಾಮೀಣ ಸೇರಿದಂತೆ ಜಿಲ್ಲೆಯ ಪ್ರತಿ ತಾಲೂಕಿನಿಂದ ಒಬ್ಬರನ್ನು ಗುರುತಿಸಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರಿಗೆ ಅಂದು ನೀಡಿ ಸನ್ಮಾನಿಸಿ ಗೌರವಿಸಲಾಗುತ್ತದೆ. ಈ ಆಯ್ಕೆಯು ಪಾರದರ್ಶಕವಾಗಿ ನಡೆಸಲು ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಮುರಳಿಧರ್ ರಾವ್, ರಾಯಚೂರು ಡಿವೈಎಸ್ಪಿ ಪರಶುರಾಮ್, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ ನಾಯಕ, ಆಹಾರ ಇಲಾಖೆಯ ಜಿಲ್ಲಾ ವ್ಯವಸ್ಥಾಪಕ ಜಿ.ಹರೀಶ್, ಪ್ರವಾಸೋದ್ಯಮ ಇಲಾಖೆಯ ಪ್ರಥಮ ದರ್ಜೆ ಸಹಾಯಕಿ ಕವಿತಾ ಕನ್ನಡ ಪರ ಸಂಘಟನೆಗಳ ಮುಖಂಡರಾದ ಬಾಬು ಭಂಡಾರಿಗಲ್, ಅಲ್ತಾಫ್, ಕೆ.ಶ್ರೀನಿವಾಸ, ಮಾರುತಿ ಬಡಿಗೇರ, ಅಣ್ಣಪ್ಪ ಮೇಟಿಗೌಡ, ವೆಂಕಟೇಶ ಬೇವಿನಬೆಂಚಿ, ಬೀಮನಗೌಡ ಇಟಿಗಿ, ಶಿವಕುಮಾರ್ ಯಾದವ್, ಶಾಂತ ಕುಲಕರ್ಣಿ ಸೇರಿದಂತೆ ವಿವಿಧ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.



# ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ ವಸೂಲಾತಿ ಹೆಚ್ಚಿಸಿ, ಉದ್ಯೋಗ ಸೃಜನೆಗೆ ಆದ್ಯತೆ ನೀಡಿ: ಸಿಇಒ ಈಶ್ವರ್ ಕುಮಾರ್ ಕಾಂದೂ



ರಾಯಚೂರು: ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ ವಸೂಲಾತಿಯನ್ನು ಹೆಚ್ಚಿಸುವುದರ ಜೊತೆಗೆ ವಿಬಿ-ಜಿ ರಾಮ್ ಜಿ ಯೋಜನೆಯಡಿ ಅರ್ಹ ಕೂಲಿಕಾರ್ಮಿಕರಿಗೆ ಉದ್ಯೋಗ ಕಲ್ಪಿಸಿ ಹೆಚ್ಚಿನ ಮಾನವ ದಿನಗಳನ್ನು ಸೃಜಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂದೂ ಸೂಚಿಸಿದರು.

ಅಕ್ಟೋಬರ್ 17ರಂದು ದೇವದುರ್ಗ ಹಾಗೂ ಅರಕೇರಾ ತಾಲೂಕಿನ ಜಾಗೀರ್ ಜಾಡಲದಿನ್ನಿ, ಕ್ಯಾದಿಗೇರಾ, ಭೂಮನಗುಡ್ಡ ಮತ್ತು ಅರಕೇರಾ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿದ ಅವರು, ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನ, ಮೂಲಸೌಕರ್ಯ ಕಾಮಗಾರಿಗಳು ಹಾಗೂ ಪಂಚಾಯಿತಿಗಳ ಆಡಳಿತಾತ್ಮಕ ಕಾರ್ಯಗಳ ಪ್ರಗತಿಯನ್ನು ಪರಿಶೀಲಿಸಿ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಿದರು.

ಜಾಗೀರ್ ಜಾಡಲದಿನ್ನಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಾಗಟಗಲ್ ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಮೇಲ್ಮಟ್ಟದ ನೀರಿನ ಸಂಗ್ರಹ ಟ್ಯಾಂಕ್ ಕಾಮಗಾರಿಯನ್ನು ವೀಕ್ಷಿಸಿದ ಅವರು, ಕಾಮಗಾರಿಯ ವಿಳಂಬದಿಂದ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಎಚ್ಚರಿಕೆ ವಹಿಸಬೇಕು. ಗುಣಮಟ್ಟ ಕಾಯ್ದುಕೊಂಡು ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಸೂಚಿಸಿದರು.

ಬಳಿಕ ಕ್ಯಾದಿಗೇರಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿ, ಎರಡು ತಿಂಗಳೊಳಗೆ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ನಿರ್ದೇಶಿಸಿದರು. ಅದೇ ರೀತಿ ಶೌಚಾಲಯ ನಿರ್ಮಾಣ ಕಾಮಗಾರಿಯನ್ನು ಒಂದು ತಿಂಗಳೊಳಗೆ ಪೂರ್ಣಗೊಳಿಸಿ ಬಳಕೆಗೆ ಅನುಕೂಲ ಮಾಡಿಕೊಡಬೇಕು ಎಂದು ತಿಳಿಸಿದರು.

ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಕಾರ್ಯಕರ್ತೆ ಗೈರುಹಾಜರಾಗಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಸಂಬಂಧಿಸಿದ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು. ಅಂಗನವಾಡಿ ಸಿಬ್ಬಂದಿ ಕರ್ತವ್ಯದಲ್ಲಿ ಸಮಯಪಾಲನೆ ಮಾಡುವುದು ಕಡ್ಡಾಯವಾಗಿದ್ದು, ಮಕ್ಕಳಿಗೆ ನಿಗದಿತ ಸಮಯದಲ್ಲಿ ಪೌಷ್ಟಿಕ ಆಹಾರ ವಿತರಿಸಬೇಕು. ಮಕ್ಕಳ ಆರೋಗ್ಯ, ಸ್ವಚ್ಛತೆ ಹಾಗೂ ಆರೈಕೆಯಲ್ಲಿ ಯಾವುದೇ ನಿರ್ಲಕ್ಷ್ಯ ತೋರಬಾರದು ಎಂದು ಎಚ್ಚರಿಸಿದರು.

ಕ್ಯಾದಿಗೇರಾ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಆಡಳಿತಾತ್ಮಕ ದಾಖಲೆಗಳು ಹಾಗೂ ತೆರಿಗೆ ವಸೂಲಾತಿ ಪ್ರಗತಿಯನ್ನು ಪರಿಶೀಲಿಸಿದ ಅವರು, ತೆರಿಗೆ ಸಂಗ್ರಹ ನಿರೀಕ್ಷಿತ ಮಟ್ಟದಲ್ಲಿಲ್ಲದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ಪಂಚಾಯಿತಿಯ ಆದಾಯ ಹೆಚ್ಚಿಸಲು ಬಾಕಿ ತೆರಿಗೆ ವಸೂಲಾತಿಗೆ ಆದ್ಯತೆ ನೀಡಬೇಕು. ಕಚೇರಿಯ ಕಡತಗಳು ಮತ್ತು ದಾಖಲೆಗಳನ್ನು ವ್ಯವಸ್ಥಿತವಾಗಿ ನಿರ್ವಹಿಸುವುದರೊಂದಿಗೆ ಸಾರ್ವಜನಿಕರಿಗೆ ಅಗತ್ಯ ಸೇವೆಗಳು ಸಕಾಲದಲ್ಲಿ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ವಿಬಿ-ಜಿ ರಾಮ್ ಜಿ ಯೋಜನೆಯಡಿ ಗ್ರಾಮೀಣ ಪ್ರದೇಶದ ಅರ್ಹ ಕೂಲಿಕಾರ್ಮಿಕರಿಗೆ ಉದ್ಯೋಗಾವಕಾಶ ಕಲ್ಪಿಸುವ ಮೂಲಕ ಮಾನವ ದಿನಗಳ ಸೃಜನೆಗೆ ಹೆಚ್ಚಿನ ಒತ್ತು ನೀಡಬೇಕು. ಉದ್ಯೋಗಕ್ಕಾಗಿ ಬೇಡಿಕೆ ಸಲ್ಲಿಸುವ ಕಾರ್ಮಿಕರಿಗೆ ಕೆಲಸ ಒದಗಿಸಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶಿಸಿದರು.

ಭೂಮನಗುಡ್ಡ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೂಲಿಕಾರ್ಮಿಕರೊಂದಿಗೆ ಸಂವಾದ ನಡೆಸಿದ ಅವರು, ಯೋಜನೆಯಡಿ ದೊರೆಯುವ ಉದ್ಯೋಗ ಮತ್ತು ಕೂಲಿ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ನಿಗದಿತ ಅಳತೆಗೆ ಅನುಗುಣವಾಗಿ ಕೆಲಸ ನಿರ್ವಹಿಸಿದರೆ ಪುರುಷ ಹಾಗೂ ಮಹಿಳಾ ಕಾರ್ಮಿಕರಿಗೆ ಸಮಾನವಾಗಿ ದಿನಕ್ಕೆ 382 ರೂಪಾಯಿ ಕೂಲಿ ದೊರೆಯುತ್ತದೆ. ಯೋಜನೆಯಡಿ ಲಭ್ಯವಿರುವ 125 ದಿನಗಳ ಉದ್ಯೋಗಾವಕಾಶವನ್ನು ಅರ್ಹ ಕಾರ್ಮಿಕರು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನಂತರ ಅರಕೇರಾ ಗ್ರಾಮದಲ್ಲಿರುವ ಕಿಶೋರಿ ಕೇಂದ್ರಕ್ಕೆ ಭೇಟಿ ನೀಡಿ, ಕೇಂದ್ರದ ಕಾರ್ಯನಿರ್ವಹಣೆ, ಮೂಲಸೌಕರ್ಯ ಹಾಗೂ ಫಲಾನುಭವಿಗಳಿಗೆ ಒದಗಿಸಲಾಗುತ್ತಿರುವ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಿದರು. ಕೇಂದ್ರದ ಚಟುವಟಿಕೆಗಳು ಪರಿಣಾಮಕಾರಿಯಾಗಿ ನಡೆಯುವಂತೆ ಸಂಬಂಧಿಸಿದ ಸಿಬ್ಬಂದಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಾಲ್ಮೀಕಿ, ಸಹಾಯಕ ನಿರ್ದೇಶಕ ಅಣ್ಣರಾವ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಎಂಐಎಸ್ ಸಂಯೋಜಕ, ತಾಂತ್ರಿಕ ಸಂಯೋಜಕ, ಟಿಎಂಐಎಸ್ ಸಂಯೋಜಕ ಹಾಗೂ ವಿವಿಧ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ಉಪಸ್ಥಿತರಿದ್ದರು.

# ರಸ್ತೆ ದುರಸ್ತಿಗೂ ಮುಖ್ಯಮಂತ್ರಿ ಹಸ್ತಕ್ಷೇಪ ಬೇಕೇ? ಆಡಳಿತದ ನಿರ್ಲಕ್ಷ್ಯಕ್ಕೆ

## ರಾಮನಗೌಡ ಏಗನೂರು ಕಿಡಿ



ರಾಯಚೂರು: ನಗರದ ಚಂದ್ರಮೌಳೇಶ್ವರಿ ದೇವಸ್ಥಾನದ ಎದುರಿನ ರಸ್ತೆ ಹಾಗೂ ಚರಂಡಿ ಅವ್ಯವಸ್ಥೆಯಿಂದ ಸಾರ್ವಜನಿಕರು ನಿತ್ಯ ತೊಂದರೆ ಅನುಭವಿಸುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸಮಸ್ಯೆ ಬಗೆಹರಿಸಲು ಮುಂದಾಗದಿರುವುದು ದುರದೃಷ್ಟಕರ ಎಂದು ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಚಂದ್ರಮೌಳೇಶ್ವರಿ ದೇವಸ್ಥಾನದ ಮುಂಭಾಗದ ರಸ್ತೆ ಹಾಗೂ ರಾಜಕಾಲುವೆಯ ಸ್ಥಿತಿಯನ್ನು ಸ್ಥಳಕ್ಕೆ ತೆರಳಿ ಪರಿಶೀಲಿಸಿದ ಅವರು, ಸಾರ್ವಜನಿಕರು ಎದುರಿಸುತ್ತಿರುವ ಸಂಕಷ್ಟಗಳ ಬಗ್ಗೆ ಸ್ಥಳೀಯರಿಂದ ಮಾಹಿತಿ ಪಡೆದುಕೊಂಡರು. ಪ್ರತಿನಿತ್ಯ ಸುಮಾರು 30 ಸಾವಿರಕ್ಕೂ ಹೆಚ್ಚು ಜನರು ಸಂಚರಿಸುವ ಪ್ರಮುಖ ರಸ್ತೆಯೊಂದು ವರ್ಷಗಳಿಂದ ದುಸ್ಥಿತಿಯಲ್ಲಿರುವುದು ಆಡಳಿತ ವ್ಯವಸ್ಥೆಯ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಆರೋಪಿಸಿದರು.

ನಗರದ ಪ್ರಮುಖ ರಸ್ತೆಯೊಂದನ್ನು ದುರಸ್ತಿಗೊಳಿಸಲು ಇನ್ನೆಷ್ಟು ವರ್ಷ ಕಾಯಬೇಕು? ರಸ್ತೆ ಹಾಗೂ ಚರಂಡಿಯಂತಹ ಕನಿಷ್ಠ ಮೂಲಸೌಕರ್ಯಗಳನ್ನು ಸರಿಪಡಿಸಲು ಮುಖ್ಯಮಂತ್ರಿಗಳೇ ಬಂದು ಆದೇಶ ನೀಡಬೇಕೇ? ಸ್ಥಳೀಯ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ಇಂತಹ ಸಮಸ್ಯೆಗಳನ್ನು ಪರಿಹರಿಸುವ ಜವಾಬ್ದಾರಿ ಇಲ್ಲವೇ ಎಂದು ಪ್ರಶ್ನಿಸಿದರು.

ದೇವಸ್ಥಾನದ ಎದುರಿನ ರಾಜಕಾಲುವೆ ಬ್ರಿಟಿಷರ ಆಡಳಿತದ ಅವಧಿಯಲ್ಲಿ ನಿರ್ಮಾಣಗೊಂಡಿದ್ದು, ಹಲವು ದಶಕಗಳು ಕಳೆದರೂ ಅದರ ಸ್ಥಿತಿಯಲ್ಲಿ ನಿರೀಕ್ಷಿತ ಸುಧಾರಣೆಯಾಗಿಲ್ಲ. ನಗರ ವಿಸ್ತಾರಗೊಂಡಿದೆ, ಜನಸಂಖ್ಯೆ ಹಾಗೂ ವಾಹನಗಳ ಓಡಾಟ ಗಣನೀಯವಾಗಿ ಹೆಚ್ಚಾಗಿದೆ. ಆದರೆ ಅದಕ್ಕೆ ಅನುಗುಣವಾಗಿ ರಸ್ತೆ ಮತ್ತು ಚರಂಡಿ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವಲ್ಲಿ ಆಡಳಿತ ನಿರ್ಲಕ್ಷ್ಯ ತೋರಿದೆ ಎಂದು ದೂರಿದರು.

ಈ ಮಾರ್ಗದಲ್ಲಿ ಅಸ್ತಿತ್ವದಲ್ಲಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಮತ್ತು ಚರಂಡಿಯಿಂದ ಹೊರಚಾಚಿರುವ ಪೈಪ್‌ಗಳು ಪಾದಚಾರಿಗಳು ಹಾಗೂ ವಾಹನ ಸವಾರರಿಗೆ ಅಪಾಯ ಉಂಟುಮಾಡುವಂತಿವೆ. ಅದರಲ್ಲೂ ರಾತ್ರಿ ವೇಳೆ ರಸ್ತೆ ಪರಿಸ್ಥಿತಿಯ ಅರಿವಿಲ್ಲದೆ ಸಂಚರಿಸುವವರು ಅಪಘಾತಕ್ಕೀಡಾಗುವ ಸಾಧ್ಯತೆ ಹೆಚ್ಚಾಗಿದೆ. ಜನನಿಬಿಡ ಪ್ರದೇಶದಲ್ಲಿಯೇ ಇಂತಹ ಅಪಾಯಕಾರಿ ಸ್ಥಿತಿ ಮುಂದುವರಿದಿರುವುದು ಸಾರ್ವಜನಿಕರ ಸುರಕ್ಷತೆಯ ಬಗ್ಗೆ ಅಧಿಕಾರಿಗಳಿಗಿರುವ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಜನರು ತಮ್ಮ ದೈನಂದಿನ ಕೆಲಸಗಳಿಗೆ ತೆರಳಲು ಬಳಸುವ ರಸ್ತೆಯಲ್ಲಿ ಸುರಕ್ಷಿತವಾಗಿ ಸಂಚರಿಸುವ ವಾತಾವರಣವೇ ಇಲ್ಲದಂತಾಗಿದೆ. ರಸ್ತೆ ಹದಗೆಟ್ಟಿರುವುದರ ಜೊತೆಗೆ ಸಮರ್ಪಕ ಚರಂಡಿ ವ್ಯವಸ್ಥೆಯ ಕೊರತೆಯೂ ಸಮಸ್ಯೆಯನ್ನು ಮತ್ತಷ್ಟು ಉಲ್ಬಣಗೊಳಿಸಿದೆ. ಸಾರ್ವಜನಿಕರು ಅಪಾಯದ ಭೀತಿಯಲ್ಲಿಯೇ ಓಡಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದರೂ ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸುವ ಪ್ರಯತ್ನಗಳು ಕಾಣುತ್ತಿಲ್ಲ ಎಂದು ಆಕ್ಷೇಪಿಸಿದರು.

ನಗರದ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳನ್ನು ಘೋಷಿಸುವ ಜನಪ್ರತಿನಿಧಿಗಳು ಮೊದಲು ಜನಸಾಮಾನ್ಯರು ನಿತ್ಯ ಎದುರಿಸುತ್ತಿರುವ ತೊಂದರೆಗಳತ್ತ ಗಮನಹರಿಸಬೇಕು. ಅಭಿವೃದ್ಧಿ ಎಂದರೆ ಕೇವಲ ದೊಡ್ಡ ಯೋಜನೆಗಳನ್ನು ಪ್ರಕಟಿಸುವುದಲ್ಲ. ಜನರಿಗೆ ಸುಗಮ ಸಂಚಾರ, ಉತ್ತಮ ರಸ್ತೆ, ಸಮರ್ಪಕ ಚರಂಡಿ ಹಾಗೂ ಸುರಕ್ಷಿತ ಸಾರ್ವಜನಿಕ ವ್ಯವಸ್ಥೆ ಕಲ್ಪಿಸುವುದೂ ಅಷ್ಟೇ ಮುಖ್ಯ ಎಂದು ಹೇಳಿದರು.

ಚಂದ್ರಮೌಳೇಶ್ವರಿ ದೇವಸ್ಥಾನದ ಮುಂಭಾಗದ ರಸ್ತೆಯಲ್ಲಿರುವ ಒತ್ತುವರಿಯನ್ನು ಪರಿಶೀಲಿಸಿ ತೆರವಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ರಾಜಕಾಲುವೆಯ ಸ್ಥಿತಿಗತಿಯನ್ನು ಸಮಗ್ರವಾಗಿ ಅಧ್ಯಯನ ಮಾಡಿ, ಮಳೆನೀರು ಸರಾಗವಾಗಿ ಹರಿಯುವಂತೆ ವೈಜ್ಞಾನಿಕ ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು. ಚರಂಡಿಯಿಂದ ಹೊರಬಂದಿರುವ ಪೈಪ್‌ಗಳನ್ನು ಸರಿಪಡಿಸುವುದರೊಂದಿಗೆ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಸುತ್ತ ಸೂಕ್ತ ಸುರಕ್ಷತಾ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಅಪಘಾತಗಳು ಸಂಭವಿಸಿದ ಬಳಿಕ ಎಚ್ಚೆತ್ತುಕೊಳ್ಳುವ ಬದಲು ಮುನ್ನೆಚ್ಚರಿಕೆ ಕ್ರಮಗಳಿಗೆ ಆದ್ಯತೆ ನೀಡಬೇಕು. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಗಳ ನಿವಾರಣೆಗೆ ತುರ್ತು ಕಾರ್ಯಯೋಜನೆ ರೂಪಿಸಬೇಕು. ಜನರ ಜೀವ ಹಾಗೂ ಸುರಕ್ಷತೆಯ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ ರಸ್ತೆ ಮತ್ತು ಚರಂಡಿ ದುರಸ್ತಿ ಕಾಮಗಾರಿಯನ್ನು ಶೀಘ್ರ ಕೈಗೆತ್ತಿಕೊಳ್ಳಬೇಕು ಎಂದು ರಾಮನಗೌಡ ಏಗನೂರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡ ಆದಿರಾಜ ಉಪಸ್ಥಿತರಿದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಶರಣಪ್ಪ ಮಟ್ಟೂರು ಪರ ಕಾಂಗ್ರೆಸ್

## ಕಾರ್ಯಕರ್ತರಿಂದ ಮತಯಾಚನೆ



ಲಿಂಗಸುಗೂರು: ಈಶಾನ್ಯ ಕರ್ನಾಟಕ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಪರವಾಗಿ ಪಟ್ಟಣದ ವಿವಿಧ ಕಾಲೇಜುಗಳಿಗೆ ಭೇಟಿ ನೀಡಿದ ಕಾಂಗ್ರೆಸ್ ಮುಖಂಡ ಶರಣಗೌಡ ಪಾಟೀಲ್ ಬಯ್ಯಾಪುರ ಹಾಗೂ ಪಕ್ಷದ ಕಾರ್ಯಕರ್ತರು ಶಿಕ್ಷಕರಲ್ಲಿ ಮತಯಾಚನೆ ನಡೆಸಿದರು.

ಪಟ್ಟಣದ ಬಸವೇಶ್ವರ ಕಾಲೇಜು, ಸಂಗಮೇಶ್ವರ ಕಾಲೇಜು, ಡಾ. ಸುಧಾಮೂರ್ತಿ ಕಾಲೇಜು ಹಾಗೂ ಅಮರೇಶ್ವರ ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರೊಂದಿಗೆ ಸಭೆ ನಡೆಸಿದ ಮುಖಂಡರು, ಅಕ್ಟೋಬರ್ 23ರಂದು ನಡೆಯಲಿರುವ ಚುನಾವಣೆಯಲ್ಲಿ ಶರಣಪ್ಪ ಮಟ್ಟೂರು ಅವರನ್ನು ಬೆಂಬಲಿಸಿ ಗೆಲ್ಲಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶರಣಗೌಡ ಪಾಟೀಲ್ ಬಯ್ಯಾಪುರ, ಶಿಕ್ಷಕರ ಸಮಸ್ಯೆಗಳಿಗೆ ಸೂಕ್ತ ಸ್ಪಂದನೆ, ವರ್ಗಾವಣೆ ಪ್ರಕ್ರಿಯೆಯಲ್ಲಿ ನ್ಯಾಯ, ವೇತನ ಮತ್ತು ಪಿಂಚಣಿಗೆ ಸಂಬಂಧಿಸಿದ ಬೇಡಿಕೆಗಳ ಈಡೇರಿಕೆ ಹಾಗೂ ಶೈಕ್ಷಣಿಕ ಕ್ಷೇತ್ರದ ಸುಧಾರಣೆಗಳಿಗೆ ಆದ್ಯತೆ ನೀಡುವ ನಾಯಕತ್ವ ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ಶಿಕ್ಷಕರ ನೋವು-ನಲಿವುಗಳನ್ನು ಅರಿತು ಅವರ ಹಕ್ಕುಗಳ ರಕ್ಷಣೆಗಾಗಿ ವಿಧಾನ ಪರಿಷತ್‌ನಲ್ಲಿ ನಿರಂತರವಾಗಿ ಧ್ವನಿ ಎತ್ತುವ ಸಾಮರ್ಥ್ಯ ಶರಣಪ್ಪ ಮಟ್ಟೂರು ಅವರಿಗಿದೆ. ಶಿಕ್ಷಕರ ಹಿತಾಸಕ್ತಿಗಾಗಿ ಕೆಲಸ ಮಾಡುವ ಅನುಭವ ಹೊಂದಿರುವ ಅವರಿಗೆ ಮತ್ತೊಮ್ಮೆ ಅವಕಾಶ ಕಲ್ಪಿಸುವುದು ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ಹಾಗೂ ಶಿಕ್ಷಕರ ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಪರಿಣಾಮಕಾರಿಯಾಗಿ ಶ್ರಮಿಸುವ ನಾಯಕತ್ವವನ್ನು ಬೆಂಬಲಿಸಬೇಕು. ಅಕ್ಟೋಬರ್ 23ರಂದು ನಡೆಯಲಿರುವ ಚುನಾವಣೆಯಲ್ಲಿ ಶಿಕ್ಷಕ ಮತದಾರರು ತಮ್ಮ ಅಮೂಲ್ಯವಾದ ಪ್ರಥಮ ಪ್ರಾಶಸ್ತ್ಯದ ಮತವನ್ನು ಶರಣಪ್ಪ ಮಟ್ಟೂರು ಅವರಿಗೆ ನೀಡುವ ಮೂಲಕ ಅವರ ಗೆಲುವಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಜಿಲ್ಲಾ ಗ್ಯಾರಂಟಿ ಯೋಜನೆ ಅಧ್ಯಕ್ಷ ಪಾಮಯ್ಯ ಮುರಾರಿ, ಡಿ.ಜಿ. ಗುರಿಕಾರ, ಗುಂಡಪ್ಪ ನಾಯಕ, ಸೋಮಶೇಖರ್ ಐದನಾಳ, ಅಮರೇಶ ಮೇದನಾಪುರ, ಹುಸೇನಪ್ಪ, ಶಿವಪ್ಪ, ಚನ್ನರೆಡ್ಡಿ ಬಿರಾದಾರ್ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಶರಣಪ್ಪ ಮಟ್ಟೂರು ಪರ ವಸಂತಕುಮಾರ ಮತಯಾಚನೆ



ರಾಯಚೂರು: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಪರವಾಗಿ ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಅವರು ನಗರದಲ್ಲಿ ಮತಯಾಚನೆ ನಡೆಸಿದರು.

ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಉಸ್ತುವಾರಿಯೂ ಆಗಿರುವ ಅವರು, ನಗರದ ವಿವಿಧ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರು ಹಾಗೂ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಯ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವ ಮೂಲಕ ಬೆಂಬಲಿಸುವಂತೆ ಮನವಿ ಮಾಡಿದರು.

ಜಿಲ್ಲೆಯ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಯ ಪ್ರತಿನಿಧಿಗಳನ್ನು ಭೇಟಿಯಾಗಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಶೈಕ್ಷಣಿಕ ಪ್ರಗತಿಗೆ ಅಗತ್ಯ ಸಹಕಾರ ನೀಡುತ್ತಿದೆ. ವಿಶೇಷವಾಗಿ ಅಲ್ಪಸಂಖ್ಯಾತ ಸಮುದಾಯದ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ವಿವಿಧ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಗುರುತಿಸಿ ಅವುಗಳ ಪರಿಹಾರಕ್ಕೆ ಸರ್ಕಾರದ ಮಟ್ಟದಲ್ಲಿ ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಶಿಕ್ಷಕರ ಹಿತಾಸಕ್ತಿ ಕಾಪಾಡುವ ನಿಟ್ಟಿನಲ್ಲಿ ಕಾಂಗ್ರೆಸ್ ಸರ್ಕಾರ ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ. ಶಿಕ್ಷಕರ ಬೇಡಿಕೆಗಳು ಹಾಗೂ ಸೇವಾ ಸಂಬಂಧಿತ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಪರಿಹರಿಸಲು ಸರ್ಕಾರ ಬದ್ಧವಾಗಿದೆ. ಹಳೆಯ ಪಿಂಚಣಿ ಯೋಜನೆ (ಒಪಿಎಸ್) ಮರುಜಾರಿಗೆ ಸಂಬಂಧಿಸಿದಂತೆ ಈಗಾಗಲೇ ವರದಿ ಪಡೆಯಲಾಗಿದ್ದು, ಯೋಜನೆಯನ್ನು ಅನುಷ್ಠಾನಗೊಳಿಸುವ ಬದ್ಧತೆಯನ್ನು ಸರ್ಕಾರ ಹೊಂದಿದೆ ಎಂದು ತಿಳಿಸಿದರು.

ಶಿಕ್ಷಣ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಅರಿವು ಹೊಂದಿರುವ ಶರಣಪ್ಪ ಮಟ್ಟೂರು ಅವರು ಈ ಹಿಂದೆ ಒಂದು ಅವಧಿಗೆ ವಿಧಾನ ಪರಿಷತ್ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ತಮ್ಮ ಅಧಿಕಾರಾವಧಿಯಲ್ಲಿ ಶಿಕ್ಷಕರ ಹಕ್ಕುಗಳು, ಶೈಕ್ಷಣಿಕ ಸೌಲಭ್ಯಗಳ ವಿಸ್ತರಣೆ ಹಾಗೂ ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ. ಅವರ ಅನುಭವ ಮತ್ತು ಕಾರ್ಯವೈಖರಿಯನ್ನು ಪರಿಗಣಿಸಿ ಶಿಕ್ಷಕ ಮತದಾರರು ಮತ್ತೊಮ್ಮೆ ಅವರನ್ನು ವಿಧಾನ ಪರಿಷತ್ತಿಗೆ ಆಯ್ಕೆ ಮಾಡಬೇಕು ಎಂದು ಮನವಿ ಮಾಡಿದರು.

ಶಿಕ್ಷಕರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವುದರ ಜೊತೆಗೆ ಅವುಗಳಿಗೆ ಸೂಕ್ತ ಪರಿಹಾರ ದೊರಕಿಸಿಕೊಡುವ ಸಾಮರ್ಥ್ಯ ಶರಣಪ್ಪ ಮಟ್ಟೂರು ಅವರಿಗಿದೆ. ಶಿಕ್ಷಣ ಕ್ಷೇತ್ರದ ಹಿತದೃಷ್ಟಿಯಿಂದ ಶಿಕ್ಷಕರು ತಮ್ಮ ಪ್ರಥಮ ಪ್ರಾಶಸ್ತ್ಯದ ಮತವನ್ನು ಕಾಂಗ್ರೆಸ್ ಅಭ್ಯರ್ಥಿಗೆ ನೀಡಬೇಕು ಎಂದು ವಸಂತಕುಮಾರ ಕೋರಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ವಕ್ತಾರ ಡಾ. ರಝಾಕ್ ಉಸ್ತಾದ್, ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಬಸವರಾಜ ದರೂರು, ರಾಮಕೃಷ್ಣ ನಾಯಕ, ಶಿಕ್ಷಣ ಸಂಸ್ಥೆಗಳ ಪದಾಧಿಕಾರಿಗಳಾದ ಮೊಹಮ್ಮದ್ ಇಕ್ಬಾಲ್, ಅಬ್ದುಲ್ ಹೈ ಫೆರೋಜ್, ಮೊಹಮ್ಮದ್ ಇಕ್ಬಾಲ್ ಕೋಸಗಿ, ಅಬ್ದುಲ್ ಸಮದ್, ಮೊಹಮ್ಮದ್ ಇಬ್ರಾಹಿಂ, ಸೈಯದ್ ಜುಬೇರ್, ಶೇಖ್ ಮಹಿಬೂಬ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹೊಸೂರು ಸಿದ್ದಾಪುರ ಗ್ರಾಮದಲ್ಲಿ ಮೂಲಸೌಕರ್ಯ ಸಮಸ್ಯೆಗಳ ಪರಿಹಾರಕ್ಕೆ ವಾಲ್ಮೀಕಿ ಯುವ ಬ್ರಿಗೇಡ್ ಆಗ್ರಹ




ಜಾಲಹಳ್ಳಿ: ಸಮೀಪದ ಹೊಸೂರು ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ, ಚರಂಡಿ, ಸೇತುವೆ ದುರಸ್ತಿ ಹಾಗೂ ಕುಡಿಯುವ ನೀರು ಸೇರಿದಂತೆ ಸಾರ್ವಜನಿಕರು ಎದುರಿಸುತ್ತಿರುವ ಮೂಲಸೌಕರ್ಯ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸುವಂತೆ ಒತ್ತಾಯಿಸಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಯುವ ಬ್ರಿಗೇಡ್ ವತಿಯಿಂದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಗ್ರಾಮದ ವಿವಿಧ ಭಾಗಗಳಲ್ಲಿ ಮೂಲಸೌಕರ್ಯಗಳ ಕೊರತೆಯಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ವಿಶೇಷವಾಗಿ ಭೀಮ್ಮಮ್ಮ ದೇವಿಕಟ್ಟೆ ರಸ್ತೆಯಲ್ಲಿರುವ ಸೇತುವೆಯನ್ನು ದುರಸ್ತಿಗೊಳಿಸಿ ವಾಹನ ಸವಾರರು ಹಾಗೂ ಪಾದಚಾರಿಗಳ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಜಾಲಹಳ್ಳಿಗೆ ಸಂಪರ್ಕ ಕಲ್ಪಿಸುವ ಹಳೆಯ ರಸ್ತೆ ಮಾರ್ಗದಲ್ಲಿರುವ ಚರಂಡಿಯಲ್ಲಿ ಹೂಳು ಸಂಗ್ರಹವಾಗಿದ್ದು, ಅದನ್ನು ತೆರವುಗೊಳಿಸಿ ಸ್ವಚ್ಛತೆ ಕಾಪಾಡಬೇಕು. ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳುವ ಮೂಲಕ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗಳನ್ನು ನಿವಾರಿಸಬೇಕು ಎಂದು ಒತ್ತಾಯಿಸಲಾಗಿದೆ.

ಅಲ್ಲದೆ, ಕೇಂದ್ರ ಸರ್ಕಾರದ ಜಲ ಜೀವನ್ ಮಿಷನ್ ಯೋಜನೆಯಡಿ ಗ್ರಾಮದ ಪ್ರತಿಯೊಂದು ಮನೆಗೂ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಯೋಜನೆಯ ಸೌಲಭ್ಯಗಳು ಎಲ್ಲ ಅರ್ಹ ಕುಟುಂಬಗಳಿಗೆ ತಲುಪುವಂತೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕು ಎಂದು ಮನವಿ ಮಾಡಲಾಗಿದೆ.

ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಮೂಲಭೂತ ಸೌಕರ್ಯಗಳು ಅತ್ಯಗತ್ಯವಾಗಿದ್ದು, ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳನ್ನು ಅಧಿಕಾರಿಗಳು ನಿರ್ಲಕ್ಷಿಸಬಾರದು. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಮಸ್ಯಾತ್ಮಕ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಸೇತುವೆ ದುರಸ್ತಿ, ಚರಂಡಿ ಸ್ವಚ್ಛತೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗೆ ಆದ್ಯತೆ ನೀಡಿ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಕರ್ನಾಟಕ ಮಹರ್ಷಿ ವಾಲ್ಮೀಕಿ ಯುವ ಬ್ರಿಗೇಡ್ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಗ್ರಾಮಸ್ಥರ ದೈನಂದಿನ ಜೀವನಕ್ಕೆ ತೊಂದರೆಯಾಗದಂತೆ ಮೂಲಸೌಕರ್ಯ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಗ್ರಾಮ ಪಂಚಾಯಿತಿ ಆಡಳಿತ ಮುಂದಾಗಬೇಕು ಎಂದು ಮನವಿ ಮೂಲಕ ಆಗ್ರಹಿಸಲಾಗಿದೆ.

# ತಾಲೂಕು ಪಂಚಾಯತ್ ಕಚೇರಿ ಆವರಣದಲ್ಲಿ ಸ್ವಚ್ಛತಾ ಅಭಿಯಾನ



ದೇವದುರ್ಗ: ಮೂರನೇ ಶನಿವಾರದ ಅಂಗವಾಗಿ ತಾಲೂಕು ಪಂಚಾಯತ್ ಕಚೇರಿ ಆವರಣದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಕುಮಾರ್ ಅವರ ನೇತೃತ್ವದಲ್ಲಿ ಶುಕ್ರವಾರ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಯಿತು.

ಅಭಿಯಾನದಲ್ಲಿ ತಾಲೂಕು ಪಂಚಾಯತ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಕ್ರಿಯವಾಗಿ ಪಾಲ್ಗೊಂಡು ಕಚೇರಿ ಆವರಣ ಮತ್ತು ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸಿದರು. ಆವರಣದಲ್ಲಿ ಸಂಗ್ರಹವಾಗಿದ್ದ ಕಸ ಹಾಗೂ ಅನಗತ್ಯ ವಸ್ತುಗಳನ್ನು ತೆರವುಗೊಳಿಸಿ, ಕಚೇರಿ ಪರಿಸರವನ್ನು ಸ್ವಚ್ಛವಾಗಿಡಲು ಕ್ರಮ ಕೈಗೊಂಡರು.

ಸರ್ಕಾರಿ ಕಚೇರಿಗಳಲ್ಲಿ ಸ್ವಚ್ಛತೆ ಕಾಪಾಡುವುದರ ಜೊತೆಗೆ ಸಾರ್ವಜನಿಕರಲ್ಲಿ ಸ್ವಚ್ಛ ಪರಿಸರದ ಮಹತ್ವದ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಈ ಅಭಿಯಾನ ಆಯೋಜಿಸಲಾಗಿತ್ತು. ಅಧಿಕಾರಿಗಳು ಹಾಗೂ ಸಿಬ್ಬಂದಿ ಒಗ್ಗೂಡಿ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಮೂಲಕ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸಿದರು.

ಸ್ವಚ್ಛತೆ ಕೇವಲ ಒಂದು ದಿನದ ಕಾರ್ಯಕ್ರಮಕ್ಕೆ ಸೀಮಿತವಾಗದೆ ನಿತ್ಯದ ಅಭ್ಯಾಸವಾಗಬೇಕು. ಕಚೇರಿ ಆವರಣ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವುದರಿಂದ ಆರೋಗ್ಯಕರ ವಾತಾವರಣ ನಿರ್ಮಾಣ ಸಾಧ್ಯ. ಪ್ರತಿಯೊಬ್ಬರೂ ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಜವಾಬ್ದಾರಿ ಹೊಂದಬೇಕು ಎಂಬ ಸಂದೇಶವನ್ನು ಅಭಿಯಾನದ ಮೂಲಕ ನೀಡಲಾಯಿತು.

ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಕುಮಾರ್ ಅವರ ಮಾರ್ಗದರ್ಶನದಲ್ಲಿ ನಡೆದ ಸ್ವಚ್ಛತಾ ಕಾರ್ಯದಲ್ಲಿ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

# ಹಿಂದುಳಿದ ವರ್ಗಗಳ ಮೀಸಲಾತಿ ನೇಮಕಾತಿಗೆ ಅಡ್ಡಿಯಾಗದಂತೆ ಕ್ರಮವಹಿಸಿ: ಮಹೇಂದ್ರ ಕುಮಾರ್ ಮಿತ್ರ



ರಾಯಚೂರು: ರಾಜ್ಯ ಸರ್ಕಾರಿ ಹುದ್ದೆಗಳ ನೇಮಕಾತಿಯಲ್ಲಿ ಹಿಂದುಳಿದ ವರ್ಗಗಳಿಗೆ ನಿಗದಿಪಡಿಸಿರುವ ಶೇ.32ರಷ್ಟು ಮೀಸಲಾತಿಯಡಿ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸದೆ ಮುಂದುವರಿಸಲು ರಾಜ್ಯ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಡಾ. ಅಂಬೇಡ್ಕರ್ ಪರಿಶಿಷ್ಟ ಜಾತಿಗಳ ಒಕ್ಕೂಟದ ರಾಜ್ಯಾಧ್ಯಕ್ಷ ಮಹೇಂದ್ರ ಕುಮಾರ್ ಮಿತ್ರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಕ್ಟೋಬರ್ 12, 2026ರಂದು ಕರ್ನಾಟಕ ಹೈಕೋರ್ಟ್ ನೀಡಿರುವ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದೆ. ಆದರೆ ಈ ಮೇಲ್ಮನವಿಯು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ಪ್ರವರ್ಗಗಳಿಗೆ ಸಂಬಂಧಿಸಿದ್ದಾಗಿದ್ದು, ಹಿಂದುಳಿದ ವರ್ಗಗಳಿಗೆ ಕಲ್ಪಿಸಿರುವ ಶೇ.32ರಷ್ಟು ಮೀಸಲಾತಿಯೊಂದಿಗೆ ನೇರ ಸಂಬಂಧ ಹೊಂದಿಲ್ಲ ಎಂಬುದು ತಮ್ಮ ಅಭಿಪ್ರಾಯವಾಗಿದೆ. ಆದ್ದರಿಂದ ಹಿಂದುಳಿದ ವರ್ಗಗಳ ಅಭ್ಯರ್ಥಿಗಳ ನೇಮಕಾತಿಗೆ ಯಾವುದೇ ಅಡಚಣೆ ಉಂಟಾಗದಂತೆ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಜನಸಂಖ್ಯೆ ಹೆಚ್ಚಳವಾಗಿದೆ ಎಂಬ ಸರ್ಕಾರದ ವಾದವನ್ನು ಪ್ರಶ್ನಿಸಿದ ಅವರು, ಪರಿಶಿಷ್ಟ ಜಾತಿಗಳ ಪಟ್ಟಿಗೆ ಸಂವಿಧಾನಬಾಹಿರವಾಗಿ ಸೇರ್ಪಡೆ ಮಾಡಲಾಗಿದೆ ಎಂದು ತಮ್ಮ ಸಂಘಟನೆ ಆರೋಪಿಸುತ್ತಿರುವ 13 ಜಾತಿಗಳ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು. ಸಂವಿಧಾನದ ಅನುಚ್ಛೇದ 341ರ ಅಡಿಯಲ್ಲಿ ಪರಿಶಿಷ್ಟ ಜಾತಿಗಳ ಪಟ್ಟಿಯ ಪರಿಷ್ಕರಣೆಗೆ ಅಗತ್ಯವಿರುವ ಕಾನೂನು ಪ್ರಕ್ರಿಯೆ ಅನುಸರಿಸಿ, ಸಂಬಂಧಪಟ್ಟ ಜಾತಿಗಳನ್ನು ಪಟ್ಟಿಯಿಂದ ಕೈಬಿಡುವ ಕುರಿತು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಆಗ್ರಹಿಸಿದರು.

ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿಯೂ ನಿಯಮಬಾಹಿರವಾಗಿ ಕೆಲವು ಜಾತಿಗಳನ್ನು ಸೇರಿಸಲಾಗಿದೆ ಎಂಬ ಆರೋಪಗಳಿವೆ. ಇಂತಹ ವಿಷಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಸಂವಿಧಾನಾತ್ಮಕ ಹಾಗೂ ಕಾನೂನಾತ್ಮಕ ನೆಲೆಯಲ್ಲಿ ಪರಿಶೀಲಿಸಬೇಕು. ಪಟ್ಟಿಗೆ ಸೇರ್ಪಡೆಯಾಗಿರುವ ಜಾತಿಗಳ ಅರ್ಹತೆಯನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ಕೇಂದ್ರ ಸರ್ಕಾರಕ್ಕೆ ಸೂಕ್ತ ಶಿಫಾರಸುಗಳನ್ನು ಕಳುಹಿಸಬೇಕು ಎಂದು ಹೇಳಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪಟ್ಟಿಗಳಲ್ಲಿನ ಸೇರ್ಪಡೆ ಪ್ರಕ್ರಿಯೆಯು ಸಂವಿಧಾನದ ನಿಯಮಗಳಿಗೆ ಅನುಗುಣವಾಗಿರುವುದು ಅತ್ಯಂತ ಮುಖ್ಯವಾಗಿದೆ. ಅನರ್ಹವಾಗಿ ಸೇರ್ಪಡೆಯಾಗಿವೆ ಎಂದು ಆರೋಪಿಸಲಾಗುತ್ತಿರುವ ಜಾತಿಗಳ ಕುರಿತು ನಿಷ್ಪಕ್ಷಪಾತ ಪರಿಶೀಲನೆ ನಡೆಸಿ ಕ್ರಮ ಕೈಗೊಂಡರೆ ಸಾಮಾಜಿಕ ನ್ಯಾಯದ ಆಶಯಗಳಿಗೆ ಪೂರಕವಾಗಲಿದೆ. ಇಂತಹ ಕ್ರಮಗಳಿಂದ ದೌರ್ಜನ್ಯ ಪ್ರಕರಣಗಳ ಸಂಖ್ಯೆಯೂ ಕಡಿಮೆಯಾಗಬಹುದು ಎಂಬುದು ತಮ್ಮ ಅಭಿಪ್ರಾಯವಾಗಿದೆ ಎಂದು ತಿಳಿಸಿದರು.

ಸುಪ್ರೀಂ ಕೋರ್ಟ್‌ನ ದಾವೇಂದರ್ ಸಿಂಗ್ ಪ್ರಕರಣದ ತೀರ್ಪಿನ ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳೊಳಗೆ ಒಳಮೀಸಲಾತಿ ನೀತಿಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಅಗತ್ಯವಿದೆ. ಇದರಿಂದ ಸಾಮಾಜಿಕವಾಗಿ ಹಾಗೂ ಶೈಕ್ಷಣಿಕವಾಗಿ ಹೆಚ್ಚು ಹಿಂದುಳಿದಿರುವ ಸಮುದಾಯಗಳಿಗೆ ಮೀಸಲಾತಿಯ ಪ್ರಯೋಜನಗಳು ಮತ್ತು ಸರ್ಕಾರಿ ಸೌಲಭ್ಯಗಳು ಪರಿಣಾಮಕಾರಿಯಾಗಿ ತಲುಪಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಮೀಸಲಾತಿ ವಿಚಾರದಲ್ಲಿ ಉಂಟಾಗಿರುವ ಕಾನೂನು ಗೊಂದಲಗಳಿಂದ ಅರ್ಹ ಅಭ್ಯರ್ಥಿಗಳ ಉದ್ಯೋಗಾವಕಾಶಗಳಿಗೆ ತೊಂದರೆಯಾಗಬಾರದು. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಸ್ಪಷ್ಟ ನಿಲುವು ತಾಳುವ ಮೂಲಕ ಹಿಂದುಳಿದ ವರ್ಗಗಳ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರಿಸಲು ಕ್ರಮವಹಿಸಬೇಕು ಎಂದು ಮಹೇಂದ್ರ ಕುಮಾರ್ ಮಿತ್ರ ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹುಸೇನ್ ಭಾಷಾ ಪಾಲಕನಮರಡಿ ಉಪಸ್ಥಿತರಿದ್ದರು.

# ರೈತರ ಹಿತಾಸಕ್ತಿ ಕಡೆಗಣಿಸಿ ಜನಪ್ರತಿನಿಧಿಗಳಿಂದ ಹೊಂದಾಣಿಕೆ ರಾಜಕಾರಣ: ಪ್ರಭಾಕರ್ ಆರೋಪ



ರಾಯಚೂರು: ಜಿಲ್ಲೆಯ ರೈತರು ನೀರಾವರಿ ಸಮಸ್ಯೆಯಿಂದ ಸಂಕಷ್ಟ ಎದುರಿಸುತ್ತಿದ್ದರೂ ಆಡಳಿತ ಮತ್ತು ವಿರೋಧ ಪಕ್ಷಗಳ ಜನಪ್ರತಿನಿಧಿಗಳು ರೈತರ ಹಿತಾಸಕ್ತಿ ಕಾಪಾಡುವ ಬದಲು ಹೊಂದಾಣಿಕೆ ರಾಜಕಾರಣದಲ್ಲಿ ತೊಡಗಿದ್ದಾರೆ. ಇದರಿಂದ ರೈತರಿಗೆ ನಿರಂತರ ಅನ್ಯಾಯವಾಗುತ್ತಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಪ್ರಭಾಕರ್ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಲಮಟ್ಟಿಯಲ್ಲಿ ನಡೆಯಬೇಕಿದ್ದ ನೀರಾವರಿ ಸಲಹಾ ಸಮಿತಿ (ಐಸಿಸಿ) ಸಭೆಯನ್ನು ರೈತರ ಪ್ರತಿಭಟನೆಯ ಭೀತಿಯಿಂದ ಬೆಂಗಳೂರಿಗೆ ಸ್ಥಳಾಂತರಿಸಲಾಗಿದೆ. ರೈತರ ಸಮಸ್ಯೆಗಳನ್ನು ಆಲಿಸದೆ, ಅವರ ಹಿತಾಸಕ್ತಿಗೆ ವಿರುದ್ಧವಾದ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯ ರೈತರು ಬೆಳೆಗಳಿಗೆ ಸಮರ್ಪಕ ನೀರು ದೊರೆಯದೆ ಪರದಾಡುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಾದ ಜನಪ್ರತಿನಿಧಿಗಳು ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದ್ದಾರೆ. ರೈತರ ಪರವಾಗಿ ಕೆಲಸ ಮಾಡುತ್ತಿರುವುದಾಗಿ ಹೇಳಿಕೆ ನೀಡುವುದಕ್ಕಿಂತ ಅವರ ಸಂಕಷ್ಟಗಳಿಗೆ ಸ್ಪಂದಿಸಿ, ನೀರಾವರಿ ಸೌಲಭ್ಯ ಕಲ್ಪಿಸಲು ಮುಂದಾಗಬೇಕು ಎಂದು ಒತ್ತಾಯಿಸಿದರು.

ನಾರಾಯಣಪುರ ಜಲಾಶಯದಲ್ಲಿ ತುರ್ತು ಪರಿಸ್ಥಿತಿಗಾಗಿ 57 ಟಿಎಂಸಿ ನೀರನ್ನು ಕಾಯ್ದಿರಿಸಲಾಗಿದೆ ಎಂದು ತಿಳಿಸಲಾಗಿದೆ. ಇಷ್ಟೊಂದು ಪ್ರಮಾಣದ ನೀರನ್ನು ಯಾವ ತುರ್ತು ಪರಿಸ್ಥಿತಿಗಾಗಿ ಮೀಸಲಿಡಲಾಗಿದೆ ಎಂಬುದನ್ನು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಸ್ಪಷ್ಟಪಡಿಸಬೇಕು. ಕುಡಿಯುವ ನೀರಿನ ಅಗತ್ಯಕ್ಕಾಗಿ ಇಷ್ಟೊಂದು ಪ್ರಮಾಣದ ನೀರು ಕಾಯ್ದಿರಿಸುವ ಅವಶ್ಯಕತೆ ಏನಿದೆ ಎಂಬುದನ್ನು ರೈತರಿಗೆ ವಿವರಿಸಬೇಕು ಎಂದು ಆಗ್ರಹಿಸಿದರು.

ನವೆಂಬರ್, ಡಿಸೆಂಬರ್ ಹಾಗೂ ಜನವರಿ ತಿಂಗಳುಗಳಲ್ಲಿ ರೈತರು ಬೆಳೆದ ಬೆಳೆಗಳಿಗೆ ನೀರಿನ ಅಗತ್ಯವಿರುತ್ತದೆ. ಈ ಅವಧಿಯಲ್ಲಿ ಸಮರ್ಪಕವಾಗಿ ನೀರು ಹರಿಸದಿದ್ದರೆ ಬೆಳೆಗಳು ಹಾನಿಗೊಳಗಾಗಿ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಯಿದೆ. ಆದ್ದರಿಂದ ಮೊದಲ ಆದ್ಯತೆಯಾಗಿ ರೈತರ ಬೆಳೆಗಳಿಗೆ ಅಗತ್ಯವಿರುವ ನೀರನ್ನು ಒದಗಿಸಿ, ಉಳಿದ ನೀರನ್ನು ತುರ್ತು ಪರಿಸ್ಥಿತಿಗೆ ಕಾಯ್ದಿರಿಸಬೇಕು ಎಂದು ಒತ್ತಾಯಿಸಿದರು.

ರಾಯಚೂರು ಜಿಲ್ಲೆಯ ರೈತರಿಗೆ ಅಗತ್ಯವಿರುವ ನೀರನ್ನು ಸಮರ್ಪಕವಾಗಿ ಒದಗಿಸದೆ ಬೇರೆ ಜಿಲ್ಲೆಗಳು ಹಾಗೂ ರಾಜ್ಯಗಳ ರೈತರಿಗೆ ಅನುಕೂಲ ಮಾಡಿಕೊಡಲಾಗುತ್ತಿದೆ ಎಂದು ಆರೋಪಿಸಿದ ಅವರು, ನೀರಿನ ಹಂಚಿಕೆ ಮತ್ತು ನಿರ್ವಹಣೆಯಲ್ಲಿ ಜಿಲ್ಲೆಯ ರೈತರ ಹಿತಾಸಕ್ತಿಯನ್ನು ಕಡೆಗಣಿಸಬಾರದು. ನೀರಾವರಿ ಯೋಜನೆಗಳ ಪ್ರಯೋಜನ ಜಿಲ್ಲೆಯ ರೈತರಿಗೂ ಸಮರ್ಪಕವಾಗಿ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರ ದೊರಕಿಸಿಕೊಡಬೇಕಾದ ವಿರೋಧ ಪಕ್ಷದ ಜನಪ್ರತಿನಿಧಿಗಳೂ ಮೌನ ವಹಿಸಿರುವುದು ಬೇಸರದ ಸಂಗತಿ. ಆಡಳಿತ ಮತ್ತು ವಿರೋಧ ಪಕ್ಷಗಳು ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಜಿಲ್ಲೆಯ ರೈತರ ನೀರಾವರಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಮುಂದಾಗಬೇಕು ಎಂದು ಹೇಳಿದರು.

ರೈತರ ಬೆಳೆಗಳಿಗೆ ಅಗತ್ಯವಿರುವ ನೀರು ಹರಿಸುವ ಕುರಿತು ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಸೂಕ್ತ ನಿರ್ಧಾರ ಕೈಗೊಳ್ಳಬೇಕು. ಇಲ್ಲವಾದಲ್ಲಿ ರೈತರಿಗೆ ಆಗುತ್ತಿರುವ ಅನ್ಯಾಯವನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ರಾಜ್ಯಮಟ್ಟದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಪ್ರಭಾಕರ್ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬುದಯ್ಯ ಸ್ವಾಮಿ, ಶಂಕರಗೌಡ, ದೇವರಾಜ್, ಶಾಂತಪ್ಪ ಹಾಗೂ ಗೋವಿಂದ ಉಪಸ್ಥಿತರಿದ್ದರು.



**ಲಿಂಗಸುಗೂರು ಎಸ್ ಬಿಎಚ್ ಕಾಲೋನಿಯ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ಹುಣಸಿಹೊಳಿ ಕಣ್ವಮಠದ ಶ್ರೀ ಶ್ರೀ ವಿದ್ಯಾಕಣ್ವವಿರಾಜ ತೀರ್ಥರು ಪತ್ರಕರ್ತ ಕಿಶೋರ್ ಗುರುರಾಜ ಮುತಾಲಿಕ್ ಅವರನ್ನು ಸನ್ಮಾನಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಮಠದ ಧರ್ಮದರ್ಶಿ ಪ್ರಾಣೇಶ ಆಚಾರ ವಂದಲಿ, ಅಧ್ಯಕ್ಷ ಮೋಹನ್ ಜೋಶಿ, ಜಗನ್ನಾಥ ಕುಲಕರ್ಣಿ ಹಾಗೂ ರಾಜಗೋಪಾಲ ಕುಲಕರ್ಣಿ ಉಪಸ್ಥಿತರಿದ್ದರು.**

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಶರಣಪ್ಪ ಮಟ್ಟೂರು ಪರ ಕೆ. ಶಾಂತಪ್ಪ ಮತಯಾಚನೆ



ರಾಯಚೂರು, ಅ.17: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ ಅವರು ಶುಕ್ರವಾರ ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಉಪನ್ಯಾಸಕರು ಹಾಗೂ ಶಿಕ್ಷಕರ ಕ್ಷೇತ್ರದ ಮತದಾರರನ್ನು ಭೇಟಿಯಾಗಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವಂತೆ ಮನವಿ ಮಾಡಿದರು.

ಅಕ್ಟೋಬರ್ 23ರಂದು ನಡೆಯಲಿರುವ ಚುನಾವಣೆಯಲ್ಲಿ ಶರಣಪ್ಪ ಮಟ್ಟೂರು ಅವರನ್ನು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸುವಂತೆ ಕೋರಿದ ಅವರು, ಶಿಕ್ಷಕರ ಹಿತಾಸಕ್ತಿ ಕಾಪಾಡುವಲ್ಲಿ ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವಲ್ಲಿ ಕಾಂಗ್ರೆಸ್ ಪಕ್ಷ ಸದಾ ಬದ್ಧವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರನ್ನು ಉದ್ದೇಶಿಸಿ ಮಾತನಾಡಿದ ಕೆ. ಶಾಂತಪ್ಪ, ಶರಣಪ್ಪ ಮಟ್ಟೂರು ಅವರು ಈ ಹಿಂದೆ ಒಂದು ಅವಧಿಗೆ ವಿಧಾನ ಪರಿಷತ್ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದು, ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಶಿಕ್ಷಕರ ಹಕ್ಕುಗಳ ರಕ್ಷಣೆ, ವೃತ್ತಿಪರ ಗೌರವ ಹಾಗೂ ಸೇವಾ ಸೌಲಭ್ಯಗಳ ಸುಧಾರಣೆಗಾಗಿ ನಿರಂತರ ಪ್ರಯತ್ನ ನಡೆಸಿದ್ದಾರೆ. ಅವರ ಅನುಭವ ಮತ್ತು ಕಾರ್ಯದಕ್ಷತೆಯನ್ನು ಪರಿಗಣಿಸಿ ಮತ್ತೊಮ್ಮೆ ವಿಧಾನ ಪರಿಷತ್‌ಗೆ ಆಯ್ಕೆ ಮಾಡಬೇಕು ಎಂದು ಮನವಿ ಮಾಡಿದರು.

ಶಿಕ್ಷಕರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕಾಂಗ್ರೆಸ್‌ಸರ್ಕಾರಹಲವುಕ್ರಮಗಳನ್ನುಕೈಗೊಳ್ಳುತ್ತಿದೆ. ಶಿಕ್ಷಣ ಕ್ಷೇತ್ರದಲ್ಲಿ ಗುಣಮಟ್ಟ ಹೆಚ್ಚಿಸುವುದರ ಜೊತೆಗೆ ಶಿಕ್ಷಕರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದು ಪಕ್ಷದ ಆದ್ಯತೆಯಾಗಿದೆ. ಈ ಹಿನ್ನೆಲೆಯಲ್ಲಿ ಶಿಕ್ಷಕರ ಧ್ವನಿಯಾಗಿ ಕಾರ್ಯನಿರ್ವಹಿಸುವ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವ ಮೂಲಕ ಬೆಂಬಲಿಸಬೇಕು ಎಂದು ಕೋರಿದರು.

ಮಹಾನಗರ ಪಾಲಿಕೆಯ ಹಿರಿಯ ಸದಸ್ಯ ಜಯಣ್ಣ ಮಾತನಾಡಿ, ಶರಣಪ್ಪ ಮಟ್ಟೂರು ಅವರು ತಮ್ಮ ಹಿಂದಿನ ಅವಧಿಯಲ್ಲಿ ವಿಧಾನ ಪರಿಷತ್‌ನಲ್ಲಿ ಶಿಕ್ಷಕರಿಗೆ ಸಂಬಂಧಿಸಿದ ಹಲವು ಪ್ರಮುಖ ವಿಷಯಗಳನ್ನು ಪ್ರಸ್ತಾಪಿಸಿ, ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸಿದ್ದಾರೆ. ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಸಂವಿಧಾನದ 371(ಜೆ) ವಿಧಿಯಡಿ ದೊರೆಯಬೇಕಾದ ಶೈಕ್ಷಣಿಕ ಸೌಲಭ್ಯಗಳು ಹಾಗೂ ಹಕ್ಕುಗಳನ್ನು ಸಮರ್ಪಕವಾಗಿ ಒದಗಿಸುವ ನಿಟ್ಟಿನಲ್ಲಿ ನಿರಂತರ ಪ್ರಯತ್ನ ನಡೆಸಿದ್ದಾರೆ ಎಂದು ಹೇಳಿದರು.

ಶಿಕ್ಷಕರ ಸಮಸ್ಯೆಗಳ ಬಗ್ಗೆ ಸ್ಪಷ್ಟ ಅರಿವು ಹೊಂದಿರುವ ಶರಣಪ್ಪ ಮಟ್ಟೂರು ಅವರು ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವ ಸಾಮರ್ಥ್ಯ ಹೊಂದಿದ್ದಾರೆ. ಆದ್ದರಿಂದ ಶಿಕ್ಷಕ ಮತದಾರರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಮತ್ತೊಮ್ಮೆ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಜಯವಂತರಾವ್ ಪತಂಗೆ, ಜಿ. ಶಿವಮೂರ್ತಿ, ರುದ್ರಪ್ಪ ಅಂಗಡಿ, ಹರಿಬಾಬು, ತಿಮ್ಮಪ್ಪ, ಕೃಷಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಸದಸ್ಯ ಮಲ್ಲೇಶ ಕೊಲಮಿ, ಕೆ.ಇ. ಕುಮಾರ, ಹನುಮಂತು, ಹಫಿಜುಲ್ಲಾ ಸೇರಿದಂತೆ ಕಾಲೇಜಿನ ಶಿಕ್ಷಕರ ಕ್ಷೇತ್ರದ ಮತದಾರರು ಹಾಗೂ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ರೈತರು, ಕೃಷಿ ಕೂಲಿಕಾರರ ಬೇಡಿಕೆಗಳ ಈಡೇರಿಕೆಗೆ ಅ.24ರಿಂದ ಪಾದಯಾತ್ರೆ, 27ರಂದು ಬೃಹತ್ ಧರಣಿ



ರಾಯಚೂರು: ಭೂಮಿ, ಮನೆ, ನಿವೇಶನ, ಉದ್ಯೋಗ ಖಾತ್ರಿ, ಕುಡಿಯುವ ನೀರು, ಬರ ಪರಿಹಾರ ಹಾಗೂ ವಿದ್ಯುತ್ ಸಮಸ್ಯೆ ಸೇರಿದಂತೆ ರೈತರು, ಕೃಷಿ ಕೂಲಿಕಾರರು ಮತ್ತು ಗ್ರಾಮೀಣ ಕಾರ್ಮಿಕರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹಿಸಿ ಅಕ್ಟೋಬರ್ 24ರಿಂದ ಜಿಲ್ಲಾದ್ಯಂತ ಪಾದಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಅಕ್ಟೋಬರ್ 27ರಂದು ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಬೃಹತ್ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಕರ್ನಾಟಕ ಪ್ರಾಂತ ರೈತ ಸಂಘ ಹಾಗೂ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ಜಿಲ್ಲಾ ಸಮಿತಿ ಅಧ್ಯಕ್ಷ ಕರಿಯಪ್ಪ ಹಚ್ಚೋಳ್ಳಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಸಮರ್ಪಕ ಮಳೆಯಾಗದ ಪರಿಣಾಮ ರೈತರು ಬೆಳೆ ನಷ್ಟ ಅನುಭವಿಸಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿಗಾಗಿ ಮಾಡಿದ ಸಾಲ ತೀರಿಸಲಾಗದೆ ಪರದಾಡುತ್ತಿದ್ದರೆ, ಮತ್ತೊಂದೆಡೆ ಕೃಷಿ ಕೂಲಿಕಾರರಿಗೆ ಕೆಲಸವಿಲ್ಲದೆ ಕುಟುಂಬ ನಿರ್ವಹಣೆಯೇ ದುಸ್ತರವಾಗಿದೆ. ಇಂತಹ ಪರಿಸ್ಥಿತಿಯಲ್ಲಿಯೂ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ರೈತರು ಹಾಗೂ ಗ್ರಾಮೀಣ ಕಾರ್ಮಿಕರ ಸಮಸ್ಯೆಗಳಿಗೆ ಸೂಕ್ತವಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಉದ್ಯೋಗ ಖಾತ್ರಿ ಯೋಜನೆಯ ಅನುಷ್ಠಾನದಲ್ಲಿ ತಾಂತ್ರಿಕ ಅಡಚಣೆಗಳು ಎದುರಾಗುತ್ತಿದ್ದು, ಕೆಲಸಕ್ಕಾಗಿ ಅರ್ಜಿ ಸಲ್ಲಿಸಿದವರಿಗೂ ಸಕಾಲದಲ್ಲಿ ಉದ್ಯೋಗ ದೊರೆಯುತ್ತಿಲ್ಲ. ಈಗಾಗಲೇ ಕೆಲಸ ನಿರ್ವಹಿಸಿದ ಕಾರ್ಮಿಕರಿಗೆ ಕೂಲಿ ಹಣ ಪಾವತಿಯಾಗದೆ ಬಾಕಿ ಉಳಿದಿದೆ. ಬಡ ಕುಟುಂಬಗಳಿಗೆ ಮನೆ, ನಿವೇಶನ ಹಾಗೂ ಮೂಲಸೌಕರ್ಯಗಳ ಕೊರತೆಯೂ ತೀವ್ರವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಎಲ್ಲ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯಲು ಅಕ್ಟೋಬರ್ 24ರಂದು ದೇವದುರ್ಗ, ಅರಕೇರಾ, ಲಿಂಗಸುಗೂರು, ಮಸ್ಕಿ ಹಾಗೂ ಸಿಂಧನೂರು ಭಾಗಗಳಿಂದ ನಾಲ್ಕು ಪ್ರತ್ಯೇಕ ಪಾದಯಾತ್ರೆಗಳನ್ನು ಆರಂಭಿಸಲಾಗುವುದು. ವಿವಿಧ ಗ್ರಾಮಗಳ ಮೂಲಕ ಸಂಚರಿಸುವ ಪಾದಯಾತ್ರೆಗಳು ಏಳ್ ಮೈಲ್ ಕ್ರಾಸ್‌ನಲ್ಲಿ ಒಗ್ಗೂಡಲಿದ್ದು, ಅಕ್ಟೋಬರ್ 27ರಂದು ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಬೃಹತ್ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ವಿವರಿಸಿದರು.

ಬರದಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಪ್ರತಿ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು. ಬೆಳೆ ವಿಮೆ ಪರಿಹಾರವನ್ನು ವಿಳಂಬ ಮಾಡದೆ ಬಿಡುಗಡೆ ಮಾಡಬೇಕು. ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕು. ರೈತರಿಗೆ ಕೃಷಿ ಚಟುವಟಿಕೆಗಳನ್ನು ಮುಂದುವರಿಸಲು ಅನುಕೂಲವಾಗುವಂತೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಉದ್ಯೋಗ ಖಾತ್ರಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಕೆಲಸಕ್ಕಾಗಿ ಅರ್ಜಿ ಸಲ್ಲಿಸುವ ಪ್ರತಿಯೊಬ್ಬ ಅರ್ಹ ಕಾರ್ಮಿಕನಿಗೂ ಉದ್ಯೋಗ ಒದಗಿಸಬೇಕು. ಈಗಾಗಲೇ ಕೆಲಸ ಮಾಡಿರುವ ಕಾರ್ಮಿಕರ ಬಾಕಿ ಕೂಲಿಯನ್ನು ತಕ್ಷಣ ಪಾವತಿಸಬೇಕು. ಯೋಜನೆಯ ಅನುಷ್ಠಾನದಲ್ಲಿ ಎದುರಾಗುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ನಿವಾರಿಸಿ ಗ್ರಾಮೀಣ ಕಾರ್ಮಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಆಗ್ರಹಿಸಿದರು.

ಅರ್ಹ ಬಡ ಕುಟುಂಬಗಳಿಗೆ ಪಡಿತರ ಚೀಟಿ ವಿತರಿಸಿ, ಪ್ರತಿ ಕುಟುಂಬಕ್ಕೆ 50 ಕೆ.ಜಿ. ದವಸಧಾನ್ಯ ಒದಗಿಸಬೇಕು. ಸ್ಥಗಿತಗೊಂಡಿರುವ ವೃದ್ಧಾಪ್ಯ, ವಿಧವಾ ಹಾಗೂ ವಿಕಲಚೇತನರ ಪಿಂಚಣಿಗಳನ್ನು ಪುನರಾರಂಭಿಸಿ ಬಾಕಿ ಹಣ ಬಿಡುಗಡೆ ಮಾಡಬೇಕು. ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಮನೆ ಮತ್ತು ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿರುವ ಅರ್ಹ ಬಡ ಕುಟುಂಬಗಳಿಗೆ ತಕ್ಷಣ ಸೌಲಭ್ಯ ಕಲ್ಪಿಸಬೇಕು. ಸರ್ಕಾರಿ ಜಾಗಗಳಲ್ಲಿ ವಾಸಿಸುತ್ತಿರುವ ಕುಟುಂಬಗಳ ಮನೆಗಳಿಗೆ ಹಕ್ಕುಪತ್ರ ನೀಡಬೇಕು. ಭೂರಹಿತ ಬಡವರಿಗೆ ಸಾಗುವಳಿ ಭೂಮಿ ಮಂಜೂರು ಮಾಡಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿ, ಎಲ್ಲ ಗ್ರಾಮಗಳಿಗೂ ಸಮರ್ಪಕ ನೀರು ಪೂರೈಸಬೇಕು ಎಂದು ಒತ್ತಾಯಿಸಿದರು.

ಜೋಳ ಬೆಳೆಗಾರರ ಹಿತದೃಷ್ಟಿಯಿಂದ ಜನವರಿ ತಿಂಗಳಲ್ಲಿಯೇ ಸರ್ಕಾರಿ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು. ಜೋಳ ಖರೀದಿಗೆ ವಿಧಿಸಿರುವ ಮಿತಿಯನ್ನು ಹೆಚ್ಚಿಸಿ, ರೈತರು ಮಾರಾಟ ಮಾಡಿದ ಬೆಳೆಯ ಹಣವನ್ನು ಒಂದು ತಿಂಗಳೊಳಗೆ ನೇರವಾಗಿ ಅವರ ಬ್ಯಾಂಕ್ ಖಾತೆಗೆ ಜಮೆ ಮಾಡಬೇಕು. ಖರೀದಿ ಪ್ರಕ್ರಿಯೆಯಲ್ಲಿ ರೈತರಿಗೆ ಅನಗತ್ಯ ತೊಂದರೆಗಳು ಎದುರಾಗದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ದಲಿತರು ಮತ್ತು ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಿ, ಸಂತ್ರಸ್ತರಿಗೆ ಸೂಕ್ತ ಪರಿಹಾರ ಒದಗಿಸಬೇಕು. ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಗೊಳಿಸಿ ಹಿಂದಿನ ಮತದಾರರ ಪಟ್ಟಿಯನ್ನು ಮುಂದುವರಿಸಬೇಕು ಎಂಬ ಬೇಡಿಕೆಗಳನ್ನೂ ಸರ್ಕಾರದ ಮುಂದಿಡಲಾಗುವುದು ಎಂದು ತಿಳಿಸಿದರು.

ರೈತರು, ಕೃಷಿ ಕೂಲಿಕಾರರು ಮತ್ತು ಗ್ರಾಮೀಣ ಕಾರ್ಮಿಕರ ಸಮಸ್ಯೆಗಳು ಕೇವಲ ಒಂದು ವರ್ಗಕ್ಕೆ ಸೀಮಿತವಾಗಿಲ್ಲ. ಗ್ರಾಮೀಣ ಜನಜೀವನದ ಮೇಲೆ ನೇರ ಪರಿಣಾಮ ಬೀರುತ್ತಿರುವ ಈ ಸಮಸ್ಯೆಗಳಿಗೆ ಸರ್ಕಾರ ಆದ್ಯತೆಯ ಮೇರೆಗೆ ಪರಿಹಾರ ಒದಗಿಸಬೇಕು. ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಮ್ಮಿಕೊಂಡಿರುವ ಪಾದಯಾತ್ರೆ ಹಾಗೂ ಧರಣಿ ಸತ್ಯಾಗ್ರಹದಲ್ಲಿ ರೈತರು, ಕೂಲಿಕಾರರು, ಗ್ರಾಮೀಣ ಕಾರ್ಮಿಕರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಕರಿಯಪ್ಪ ಹಚ್ಚೋಳ್ಳಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಬಸವಂತರಾಯ ಗೌಡ, ನರಸಣ್ಣ ನಾಯಕ್, ಹನುಮಂತ ಕೆ.ಜಿ. ಹಾಗೂ ವೀರೇಶ್ ಉಪಸ್ಥಿತರಿದ್ದರು.

# ಅ. 22ರಿಂದ ಹತ್ತಿಯನ್ನು ಖರೀದಿಸುವ ಪ್ರಕ್ರಿಯೆ ಪ್ರಾರಂಭ: ಎಡಿಸಿ ಶಿವಾನಂದ

ರಾಯಚೂರು ಅ. 17 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆ ವ್ಯಾಪ್ತಿಯಲ್ಲಿ ಪ್ರಸ್ತುತ ಸಾಲಿನಲ್ಲಿ ಹತ್ತಿ ಬೆಂಬಲ ಬೆಲೆಯ ಕಾರ್ಯಕ್ರಮದಡಿ ಖರೀದಿ ಕೇಂದ್ರಗಳು ಮತ್ತು ನೋಂದಣಿ ಪ್ರಕ್ರಿಯೆ ಭಾರತೀಯ ಹತ್ತಿ ನಿಗಮ ವತಿಯಿಂದ ಕನಿಷ್ಠ ಬೆಂಬಲ ಬೆಲೆ (ಎಮ್‌ಎಸ್‌ಪಿ) ಅಡಿಯಲ್ಲಿ ಹತ್ತಿಯನ್ನು ಖರೀದಿಸುವ ಪ್ರಕ್ರಿಯೆಯು 2026ರ ಅಕ್ಟೋಬರ್-22ರಿಂದ ಪ್ರಾರಂಭವಾಗಲಿದೆ.

ಎಮ್‌ಎಸ್‌ಪಿ ಅಡಿಯಲ್ಲಿ ಸುಗಮ ಮತ್ತು ಪಾರದರ್ಶಕ ಖರೀದಿ ಪ್ರಕ್ರಿಯೆಯನ್ನು ಖಚಿತಪಡಿಸಲು, ಸಿಸಿಐಯು ಕಪಾಸ್ ಕಿಸಾನ್ ಮೊಬೈಲ್ ಆ್ಯಪ್ ಮೂಲಕ ಹತ್ತಿಯನ್ನು (ಕಪಾಸ್) ಖರೀದಿಸುವುದನ್ನು ಮುಂದುವರಿಸಲಿದೆ. ಆದ್ದರಿಂದ ಎಮ್‌ಎಸ್‌ಪಿ ಖರೀದಿ ಸೌಲಭ್ಯವನ್ನು ಪಡೆಯಲು ಎಲ್ಲಾ ಹತ್ತಿ ಬೆಳೆಗಾರರು 31ನೇ ಅಕ್ಟೋಬರ್ 2026 ರೊಳಗೆ ಕಪಾಸ್ ಕಿಸಾನ್ ಆ್ಯಪ್‌ನಲ್ಲಿ ನೋಂದಾಯಿಸಿಕೊಳ್ಳುವತೆ ಕೋರಲಾಗಿದೆ.

ರೈತರು ತಮ್ಮ ನೋಂದಣಿಯನ್ನು ಪೂರ್ಣಗೊಳಿಸಲು, ಅಗತ್ಯವಿರುವ ಭೂಮಿ ಹಾಗೂ ಬೆಳೆಯ ವಿವರಗಳನ್ನು ಆದಷ್ಟು ಬೇಗ ಅಪ್ಲೋಡ್ ಮಾಡಲು ಸೂಚಿಸಲಾಗಿದೆ.

ರೈತರು ತಮ್ಮ ಅನುಕೂಲಕ್ಕೆ ತಕ್ಕಂತೆ 2026ರ ಅಕ್ಟೋಬರ್ 17 ರಿಂದ 'ಕಪಾಸ್ ಕಿಸಾನ್' ಆ್ಯಪ್ ಮೂಲಕ 2026ರ ಅಕ್ಟೋಬರ್ 22ರ ದಿನಾಂಕಕ್ಕಾಗಿ ಹತ್ತಿ ಮಾರಾಟದ ಸ್ಲಾಟ್‌ಗಳನ್ನು ಕಾಯ್ದಿರಿಸಿ ಕೊಳ್ಳಬಹುದು. ಇದು ಎಮ್‌ಎಸ್‌ಪಿ ಅಡಿಯಲ್ಲಿ ಹತ್ತಿಯನ್ನು ಮಾರಾಟ ಮಾಡುವ ಪ್ರಕ್ರಿಯೆಯನ್ನು ಪಾರದರ್ಶಕ, ಅನುಕೂಲಕರ ಮತ್ತು ಯಾವುದೇ ತೊಂದರೆಗಳಿಲ್ಲದತೆ ನಡೆಸಲು ಸಹಕಾರಿಯಾಗುತ್ತದೆ. ಎಲ್ಲಾ ರೈತರು ಕಡ್ಡಾಯವಾಗಿ ನೊಂದಾಯಿಸಿಕೊಡು ಹತ್ತಿ ಬೆಂಬಲ ಬೆಲೆ ಯೋಜನೆಯ ಸವಲತ್ತನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಾಯಚೂರು ಹಾಗೂ ಸಿರವಾರ ಖರೀದಿ ಕೇಂದ್ರಗಳ ಹಿರಿಯ ವಾಣಿಜ್ಯ ಅಧಿಕಾರಿ ಕೆ. ಶ್ಯಾಮಕುಮಾರ ಮೊ. ಸಂಖ್ಯೆ: 8801184777, ಮಾನವಿ ಮತ್ತು ದೇವದುರ್ಗ ಖರೀದಿ ಕೇಂದ್ರಗಳ ಹಿರಿಯ ವಾಣಿಜ್ಯ ಅಧಿಕಾರಿ ರಾಜಶೇಖರ ಸೋಮನ ಗೌಡೂರು ಮೊ. ಸಂಖ್ಯೆ: 8073000918, ಸಿಂಧನೂರು ಖರೀದಿ ಕೇಂದ್ರದ ಹಿರಿಯ ವಾಣಿಜ್ಯ ಅಧಿಕಾರಿ ದಸರಿ ಶಿವಕುಮಾರ ಮೊ. ಸಂಖ್ಯೆ: 8639449110 ಅಥವಾ ಹತ್ತಿರದ ರೈತ ಸಂಪರ್ಕ ಕೇಂದ್ರ ಹಾಗೂ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಕಾಲೇಜುಗಳ ಹೊರಗುತ್ತಿಗೆ ಡಿ-ಗ್ರೂಪ್ ನೌಕರರ ಸೇವೆ ಮುಂದುವರಿಸಲು ಆಗ್ರಹ




ಲಿಂಗಸುಗೂರು: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿ-ಗ್ರೂಪ್ ನೌಕರರ ಸೇವೆಯನ್ನು ಅಕ್ಟೋಬರ್ 31ರ ನಂತರವೂ ಮುಂದುವರಿಸಬೇಕು ಹಾಗೂ ಯಾವುದೇ ನೌಕರರನ್ನು ಕೆಲಸದಿಂದ ಬಿಡುಗಡೆಗೊಳಿಸಬಾರದು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಇಲಾಖೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹೊರಗುತ್ತಿಗೆ ಡಿ-ಗ್ರೂಪ್ ನೌಕರರ ಸಂಘದ ಸದಸ್ಯರು ಕಾಲೇಜಿನ ಪ್ರಾಂಶುಪಾಲರಿಗೆ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರು ಮಾತನಾಡಿ, ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಹೊರಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರು ಉದ್ಯೋಗದ ಅಭದ್ರತೆಯಿಂದ ಆತಂಕಕ್ಕೆ ಒಳಗಾಗಿದ್ದಾರೆ. ಕಾಲೇಜುಗಳ ದೈನಂದಿನ ಕಾರ್ಯಚಟುವಟಿಕೆಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಈ ಸಿಬ್ಬಂದಿಯ ಸೇವೆಯನ್ನು ಮುಂದುವರಿಸುವ ಮೂಲಕ ಅವರ ಜೀವನೋಪಾಯಕ್ಕೆ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿದರು.

ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳು ಸೆಪ್ಟೆಂಬರ್ 19, 2026ರಂದು ಹಾಗೂ ಬೆಂಗಳೂರಿನ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ಸೆಪ್ಟೆಂಬರ್ 29, 2026ರಂದು ಹೊರಡಿಸಿರುವ ಆದೇಶಗಳ ಅನ್ವಯ, ಇಲಾಖೆಯ ವ್ಯಾಪ್ತಿಯ ಸರ್ಕಾರಿ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿ-ಗ್ರೂಪ್ ಸಿಬ್ಬಂದಿಯ ಸೇವೆಯನ್ನು ಅಕ್ಟೋಬರ್ 31, 2026ರವರೆಗೆ ಮುಂದುವರಿಸಲು ಸರ್ಕಾರ ಅನುಮತಿ ನೀಡಿದೆ ಎಂದು ತಿಳಿಸಿದರು.

ಆದರೆ, ನಿಗದಿತ ಅವಧಿ ಮುಕ್ತಾಯವಾದ ನಂತರ ಹೊರಗುತ್ತಿಗೆ ನೌಕರರ ಸೇವೆಯನ್ನು ಮತ್ತಷ್ಟು ವಿಸ್ತರಿಸಲು ಸಾಧ್ಯವಿಲ್ಲ ಎಂದು ತಿಳಿಸಲಾಗಿದೆ. ಅಲ್ಲದೆ, ಅಕ್ಟೋಬರ್ 31ರ ನಂತರ ಸಂಬಂಧಪಟ್ಟ ಸಿಬ್ಬಂದಿಯನ್ನು ಬಿಡುಗಡೆಗೊಳಿಸಲು ಅಥವಾ ಸಂಬಂಧಪಟ್ಟ ಕಾಲೇಜಿಗೆ ಹಿಂದಿರುಗಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಇಲಾಖೆಯ ವ್ಯಾಪ್ತಿಯ ಸಹಬಟವಾಡೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಇದರಿಂದ ನೌಕರರು ತಮ್ಮ ಉದ್ಯೋಗ ಕಳೆದುಕೊಳ್ಳುವ ಆತಂಕ ಎದುರಿಸುತ್ತಿದ್ದಾರೆ ಎಂದು ಅಳಲು ತೋಡಿಕೊಂಡರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅನೇಕ ವರ್ಷಗಳಿಂದ ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಡಿ-ಗ್ರೂಪ್ ನೌಕರರ ಅನುಭವ, ಸೇವೆ ಹಾಗೂ ಅವರ ಕುಟುಂಬಗಳ ಆರ್ಥಿಕ ಪರಿಸ್ಥಿತಿಯನ್ನು ಸರ್ಕಾರ ಪರಿಗಣಿಸಬೇಕು. ಏಕಾಏಕಿ ಸೇವೆಯಿಂದ ಬಿಡುಗಡೆಗೊಳಿಸಿದರೆ ನೌಕರರು ಮತ್ತು ಅವರ ಕುಟುಂಬಗಳು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಹೊರಗುತ್ತಿಗೆ ನೌಕರರ ಸೇವೆ ಮುಂದುವರಿಸುವ ಕುರಿತು ಸರ್ಕಾರದಿಂದ ಮುಂದಿನ ನಿರ್ದೇಶನ ಅಥವಾ ಅಂತಿಮ ನಿರ್ಧಾರ ಬರುವವರೆಗೆ ಹಾಲಿ ಸಿಬ್ಬಂದಿಯನ್ನು ಕರ್ತವ್ಯದಲ್ಲಿ ಮುಂದುವರಿಸಬೇಕು. ಯಾವುದೇ ನೌಕರರನ್ನು ಮಧ್ಯಂತರದಲ್ಲಿ ಕೆಲಸದಿಂದ ಬಿಡುಗಡೆಗೊಳಿಸದಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.

ತಮ್ಮ ಮನವಿಯನ್ನು ಉನ್ನತ ಶಿಕ್ಷಣ ಇಲಾಖೆಯ ಮೇಲಧಿಕಾರಿಗಳ ಗಮನಕ್ಕೆ ತಂದು, ಹೊರಗುತ್ತಿಗೆ ಡಿ-ಗ್ರೂಪ್ ನೌಕರರ ಉದ್ಯೋಗ ಭದ್ರತೆ ಹಾಗೂ ಹಿತಾಸಕ್ತಿ ಕಾಪಾಡುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕಾಲೇಜಿನ ಪ್ರಾಂಶುಪಾಲರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅಮರೇಶ್, ಬಸವರಾಜ್ ನಾಯಕ್, ಶರಣ್ಯ, ನಾಗಯ್ಯ, ನಾಗಪ್ಪ ಸೇರಿದಂತೆ ಹೊರಗುತ್ತಿಗೆ ನೌಕರರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K